ಸಂಪುಟ 01 । ಸಂಚಿಕೆ 89 । ಶನಿವಾರ 14 ಫೆಬ್ರವರಿ 2026 । ಪುಟ 4 । ಬೆಲೆ-2 ರೂ.

ಇರ್ಫಾನ್ ಕೆ
ಸಂಪಾದಕರು

M A ವಹಾಬ್
ಪ್ರಧಾನ ಸಂಪಾದಕರು


# ನೈಜ್ಯ ದೆಸೆ

NAIJYA DESE

ಸತ್ಯದ ದಿಕ್ಕು TRUE PATH

ಕನ್ನಡ ದಿನ ಪತ್ರಿಕೆ

ಸಿಂಧನೂರು, ಮಸ್ಕಿ ಮಾನ್ವಿ, ಲಿಂಗಸೂರು, ರಾಯಚೂರ,ದೇವದುರ್ಗ ಬಳ್ಳಾರಿ, ಕೊಪ್ಪಳ ಯಾದಗಿರಿ, ಕಲಬುರ್ಗಿ, ಬೀದರ, ವಿಜಯಪುರ. ಗದಗ, ವಿಜಯನಗರ. ಏಕಕಾಲಕ್ಕೆ ಪ್ರಕಟಣೆ

REGIONAL KANNADA DAILY MORNING

RNI code: KNKAN/25/A3581 ಮೋ: 9902277588, 9880707587, 9008787586 naijyadese@gmail.com


## ಈ ದಿನದ ವಿಶೇಷ

**01) ಪೋಷಕರ ಆರಾಧನಾ ದಿನ:**

ಜಾಗತಿಕ ಮನ್ನಣೆ 2007 ರಲ್ಲಿ ಆಸಾರಾಮ್ ಬಾಪು ಅವ-ರಿಂದ ಪ್ರಾರಂಭಿಸಲ್ಪಟ್ಟ ಪೋಷಕರ ಆರಾಧನಾ ದಿನ (ಮಾತೃ ಪಿತೃ ಪೂಜನ್ ದಿವಸ್) ಈಗ ಜಾಗತಿಕ ಸುಧಾರಣೆಯಾಗಿ ಮನ್ನಣೆ ಗಳಿಸಿದೆ. ಎಲ್ಲಾ ಧರ್ಮಗಳು, ಪಂಗಡಗಳು ಮತ್ತು ರಾಜ್ಯಗಳ ವ್ಯಕ್ತಿಗಳು ಸೇರಿದಂತೆ ಪ್ರಪಂಚದಾದ್ಯಂತ ಜನರು ಇದನ್ನು ಪೂರ್ಣ ಹೃದಯದಿಂದ ಸ್ವೀಕರಿಸುತ್ತಿದ್ದಾರೆ.

**2 ) ವಿಶ್ವ ಜನ್ಮಜಾತ ಹೃದಯ ದೋಷ ಜಾಗೃತಿ ದಿನ**

ಪ್ರತಿ ವರ್ಷ ಫೆಬ್ರವರಿ 14 ರಂದು, ಜನ್ಮಜಾತ ಹೃದಯ ದೋಷಗಳ ಬಗ್ಗೆ ಜನರಲ್ಲಿ ಗಮನ ಸೆಳೆಯಲು ಮತ್ತು ಶಿಕ್ಷಣ ನೀಡಲು ವಿಶ್ವ ಜನ್ಮಜಾತ ಹೃದಯ ದೋಷ ಜಾಗೃತಿ ದಿನವನ್ನು ಆಚರಿಸಲಾಗುತ್ತದೆ

**03) ಸಂತ ಪ್ರೇಮಿಗಳ ದಿನ**

ಪ್ರತಿ ವರ್ಷ ಫೆಬ್ರವರಿ 14 ರಂದು, ಪ್ರೇಮಿಗಳ ದಿನ ಅಥ-'ವಾ ಸಂತ ಪ್ರೇಮಿಗಳ ಹಬ್ಬವನ್ನು ಆಚರಿಸಲಾಗುತ್ತದೆ. 3 ನೇ ಶತಮಾನದಲ್ಲಿ ರೋಮ್‌ನಲ್ಲಿ ವಾಸಿಸುತ್ತಿದ್ದ ಸಂತ ವ್ಯಾಲೆಂಟೈನ್ ಎಂಬ ಕ್ಯಾಥೋಲಿಕ್ ಪಾದ್ರಿಯ ಹೆಸರನ್ನು ಪ್ರೇಮಿಗಳ ದಿನ ಎಂದು ಹೆಸರಿಸಲಾಗಿದೆ

## ಸುಭಾಷಿತ

ಕಡಲತಡಿಯಲ್ಲಿ ನಿಂತು ನೀರನ್ನು ನೋಡುತ್ತ ಕಾಲ ಕಳೆಯುತ್ತಿದ್ದರೆ ಸಮುದ್ರವನ್ನು ದಾಟಲು ಸಾಧ್ಯವಿಲ್ಲ.

ರವೀಂದ್ರನಾಥ ಟ್ಯಾಗೋರ್

ನೈಜ್ಯ ದೆಸೆ ಕನ್ನಡ ದಿನಪತ್ರಿಕೆಯನ್ನು ತಪ್ಪದೆ ಓದಿರಿ.

# ಎಸ್-400 ಕ್ಷಿಪಣಿ ಖರೀದಿಗೆ 10 ಸಾವಿರ ಕೋಟಿ

**ನವದೆಹಲಿ: ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅವರ ಅಧ್ಯಕ್ಷತೆಯಲ್ಲಿ ನಡೆದ ರಕ್ಷಣಾ ಸ್ವಾಧೀನ ಮಂಡಳಿ ರಷ್ಯಾದಿಂದ 10,000 ಕೋಟಿ ರೂ. ವೆಚ್ಚದಲ್ಲಿ 288 ಎಸ್ -400 ಕ್ಷಿಪಣಿಗಳ ಖರೀದಿಗೆ ಅಗತ್ಯತೆಯ ಸ್ವೀಕಾರಕ್ಕೆ ಒಪ್ಪಿಗೆ ನೀಡಿದೆ ಎಂದು ತಿಳಿದುಬಂದಿದೆ.**



ಎಸ್-400 ಮತ್ತು ಪ್ಯಾಂಟ್ಸಿರ್ ಕ್ಷಿಪಣಿ ವ್ಯವಸ್ಥೆಗಳನ್ನು ಗಡಿಯಾಚೆಯಿಂದ ಹಾರಿಸಲಾದ ವೈಮಾನಿಕ ವಸ್ತುಗಳನ್ನು ತೆಗೆದುಹಾಕಲು ಎರಡು-ಪದರದ ರಕ್ಷಣಾ ವ್ಯವಸ್ಥೆಯಲ್ಲಿ ಸಂಯೋಜಿಸಬಹುದು. ಆಪರೇಷನ್ ಸಿಂಧೂರ್‌ನಲ್ಲಿ ಬಳಸಲಾದ ದಾಸ್ತಾನುಗಳನ್ನು ಮರುಪೂರಣಗೊಳಿಸಲು ಹಾಗೂ ಹೆಚ್ಚು ದೀರ್ಘ-ಶ್ರೇಣಿಯ ಮತ್ತು ಅಲ್ಪ-ಶ್ರೇಣಿಯ ಮೇಲ್ಮೈಯಿಂದ ಗಾಳಿಗೆ ವಿತರಣಾ ವ್ಯವಸ್ಥೆಗಳನ್ನು ಸಂಗ್ರಹಿಸಲು ಸರ್ಕಾರವು ಈ ಕ್ಷಿಪಣಿಗಳನ್ನು ಸ್ವಾಧೀನಪಡಿಸಿಕೊಳ್ಳಲು ಸಿದ್ಧತೆ ನಡೆಸುತ್ತಿದೆ ಎಂದು ವರದಿಯಾಗಿದೆ.

ಜ್ಯೋತಿಷ್ಯ ಸಲಹೆ ಸೇವೆಗಳು ಡಿಎಸಿಯಿಂದ ಅನುಮೋದನೆ ಪಡೆದಿರುವ 120 ಅಲ್ಪ-ಶ್ರೇಣಿಯ ಕ್ಷಿಪಣಿಗಳು ಮತ್ತು 168 ದೀರ್ಘ-ಶ್ರೇಣಿಯ ಕ್ಷಿಪಣಿಗಳನ್ನು ಒಳಗೊಳ್ಳುತ್ತದೆ ಮತ್ತು ಸ್ವಾಧೀನವನ್ನು ಫಾಸ್ಟ್ ಟ್ರ್ಯಾಕ್ ಪ್ರೊಸೀಜರ್ ಮೂಲಕ ಮಾಡಲಾಗುತ್ತದೆ ಎಂದು ಮೂಲಗಳು ತಿಳಿಸಿವೆ. ಭಾರತವು ಈಗಾಗಲೇ ಒಪ್ಪಂದ ಮಾಡಿಕೊಂಡಿರುವ ಎರಡು ಎಸ್-400 ವ್ಯವಸ್ಥೆಗಳನ್ನು ಈ ವರ್ಷದ ಜೂನ್ ಮತ್ತು ನವೆಂಬರ್‌ನಲ್ಲಿ ಪಡೆಯಲಿದೆ ಎಂದು ಅವರು ಹೇಳಿದರು.ಭಾರತೀಯ ವಾಯುಪಡೆಯು ರಷ್ಯಾದಿಂದ ಪ್ಯಾಂಟ್ಸಿರ್ ಅಲ್ಪ-ಶ್ರೇಣಿ ವ್ಯವಸ್ಥೆಯ ಜೊತೆಗೆ ಇನ್ನೂ ಐದು ಎಸ್-400 ವ್ಯವಸ್ಥೆಗಳನ್ನು ಖರೀದಿಸಲು ವಾದಿಸುತ್ತಿದೆ. ರಷ್ಯಾದ ಕ್ಷಿಪಣಿ ವ್ಯವಸ್ಥೆಯು ಸಶಸ್ತ್ರ ಮತ್ತು ಕಾಮಿಕಾಜ್ ಡ್ರೋನ್‌ಗಳನ್ನು ಎದುರಿಸುವಲ್ಲಿ ಪರಿಣಾಮಕಾರಿಯಾಗಿದೆ.

ಗಡಿಯಾಚೆಯಿಂದ ಹಾ-ರಿಸಲಾಗುವ ವೈಮಾನಿಕ ವಸ್ತುಗಳನ್ನು ತೆಗೆದುಹಾಕಲು ಎಸ್-400 ಮತ್ತು ಪ್ಯಾಂಟ್ಸಿರ್ ಕ್ಷಿಪಣಿ ವ್ಯವಸ್ಥೆಗಳನ್ನು ಎರಡು-ಪದರದ ರಕ್ಷಣಾ ವ್ಯವಸ್ಥೆಯಲ್ಲಿ ಸಂಯೋಜಿಸಬಹುದು. ರಕ್ಷಣಾ ಕಾರ್ಯದರ್ಶಿ ಅಧ್ಯಕ್ಷತೆಯ ರಕ್ಷಣಾ ಖರೀದಿ ಮಂಡಳಿಯು ಪ್ರಸ್ತಾವನೆಯನ್ನು ಪರಿಶೀಲಿಸುತ್ತದೆ. ನಂತರ ಅದು ಅಗತ್ಯವನ್ನು ಸ್ವೀಕರಿಸಲು ಡಿಎಸಿಗೆ ವರ್ಗಾಯಿಸುತ್ತದೆ. ಇದನ್ನು ತೆರವುಗೊಳಿಸಿದ ನಂತರ, ಮಾರಾಟಗಾರರೊಂದಿಗೆ ವಿವರವಾದ ವೆಚ್ಚ ಮಾತುಕತೆಗಳನ್ನು ಕೈಗೊಳ್ಳಲಾಗುತ್ತದೆ, ನಂತರ ಸಮರ್ಥ ಪ್ರಾಧಿಕಾರದಿಂದ ಹಣ-ಕಾಸಿನ ಅನುಮೋದನೆಯನ್ನು ಪಡೆಯಲಾಗುತ್ತದೆ.

ಭದ್ರತೆಯ ಕುರಿತಾದ ಕ್ಯಾಬಿನೆಟ್ ಸಮಿತಿ (ಸಿಸಿಎಸ್) ಅಂತಿಮ ಅನುಮತಿಯನ್ನು ನೀಡುತ್ತದೆ. ರಕ್ಷಣಾ ಸಚಿವರು ಸುಮಾರು 3.60 ಲಕ್ಷ ಕೋಟಿ ಅಂದಾಜು ಮೌಲ್ಯದ ವಿವಿಧ ಪ್ರಸ್ತಾವನೆಗಳಿಗೆ ಎಒಎನ್ ಅನ್ನು ನೀಡಿದ್ದಾರೆ ಎಂದು ಅಧಿಕೃತ ಹೇಳಿಕೆ ತಿಳಿಸಿದೆ. ಭಾರತೀಯ ವಾಯುಪಡೆಗೆ (ಐಎಎಫ್), ಬಹು-ಪಾತ್ರದ ಯುದ್ಧ ವಿಮಾನ, ರಫೇಲ್, ಯುದ್ಧ ಕ್ಷಿಪಣಿಗಳು ಮತ್ತು ವಾಯು-ನೌಕೆ ಆಧಾರಿತ ಹೈ ಆಲ್ಟಿಟ್ಯೂಡ್ ಹುಸಿ-ಉಪಗ್ರಹಗಳ ಖರೀದಿಗೆ ಎಒಎನ್ ಅನ್ನು ಅನುಮೋದಿಸಲಾಗಿದೆ. ಎಂಆರ್‌ಎಫ್‌ಎ ಖರೀದಿಯು ಸಂಘರ್ಷದ ವರ್ಣಪಟಲದಾದ್ಯಂತ ವಾಯು ಪ್ರಾಬಲ್ಯದ ಪಾತ್ರಗಳನ್ನು ಕೈಗೊಳ್ಳುವ ಸಾಮರ್ಥ್ಯವನ್ನು ಹೆಚ್ಚಿಸುತ್ತದೆ ಮತ್ತು ದೀರ್ಘ-ಶ್ರೇಣಿಯ ಆಕ್ರಮಣ-ಕಾರಿ ದಾಳಿಗಳೊಂದಿಗೆ ಐಎಎಫ್‌ನ ತಡೆಗಟ್ಟುವ ಸಾಮರ್ಥ್ಯಗಳನ್ನು ಗಮನಾರ್ಹವಾಗಿ ಹೆಚ್ಚಿಸುತ್ತದೆ ಎಂದು ರಕ್ಷಣಾ ಸಚಿವಾಲಯದ ಹೇಳಿಕೆ ತಿಳಿಸಿದೆ.

# ಮಕ್ಕಳ ಸಂರಕ್ಷಣೆಗೆ ಬದ್ಧತೆ ಅಗತ್ಯ: ಶೇಖರಗೌಡ ರಾಮತ್ನಾಳ



**ನೈಜ್ಯ ದೆಸೆ ನ್ಯೂಸ್**

**ಪಟ್ಟಣದ ಬಾಬು ಜಗಜೀವನರಾವ್ ಸಮುದಾಯ ಭವನದಲ್ಲಿ ಮಕ್ಕಳ ಹಕ್ಕುಗಳ ಕುರಿತ ಜಾಗೃತಿ ಕಾರ್ಯಕ್ರಮ ನಡೆಯಿತು. ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ, ಜಿಲ್ಲಾಡಳಿತ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಮಕ್ಕಳ ರಕ್ಷಾಣಾ ಘಟಕ ಹಾಗೂ ಪಟ್ಟಣ ಪಂಚಾಯಿತಿ ಸಹಯೋಗದಲ್ಲಿ ಹಮ್ಮಿಕೊಳ್ಳಲಾಗಿದ್ದ ಕಾರ್ಯಕ್ರಮಕ್ಕೆ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯ ಶೇಖರಗೌಡ ರಾಮತ್ನಾಳ ಚಾಲನೆ ನೀಡಿದರು.**

ಬಳಿಕ ಮಾತನಾಡಿದ ಅವರು, 'ಮಕ್ಕಳ ಮೇಲಿನ ಲೈಂಗಿಕ ದೌರ್ಜನ್ಯ, ಹಲ್ಲೆ, ಕಿರುಕುಳ ಮತ್ತು ಇನ್ನಿತರ ದೌರ್ಜನ್ಯಗಳನ್ನು ತಡೆಗಟ್ಟಲು ಹಾಗೂ ಮಕ್ಕಳಿಗೆ ಸೂಕ್ತ ರಕ್ಷಿಸಲು ಸರ್ಕಾರವು ಲೈಂಗಿಕ ಅಪರಾಧಗಳಿಂದ ಮಕ್ಕಳ ರಕ್ಷಣಾ ಕಾಯ್ದೆಯನ್ನು ಜಾ-ರಿಗೆ ತರಲಾಗಿದೆ' ಎಂದು ಹೇಳಿದರು. 'ಮಕ್ಕಳ ಮೇಲಿನ ಲೈಂಗಿಕ ದೌರ್ಜನ್ಯಕ್ಕೆ ಕನಿಷ್ಠ 20 ವರ್ಷದಿಂದ ಜೀವಾವಧಿ ಜೈಲು ಶಿಕ್ಷೆಯನ್ನು ವಿಧಿಸಬಹುದಾಗಿದೆ. ರಾಷ್ಟ್ರೀಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಸರ್ವೆ 2019-20ರನ್ವಯ ಜಿಲ್ಲೆಯಲ್ಲಿ 18ವರ್ಷದೊಳಗೆ ಮದುವೆಯಾದ ವಯಸ್ಕ ಮಹಿಳೆಯರ ಪ್ರಮಾಣ ಶೇ27.1ರಷ್ಟಿದೆ. ರಾಜ್ಯದ ಪ್ರಮಾಣ ಶೇ21.4, ಇದು ರಾಜ್ಯದ ಸರಾಸರಿಗಿಂತಲೂ ಶೇ6ರಷ್ಟು ಹೆಚ್ಚಳವಾಗಿದೆ.

ಜಿಲ್ಲೆಯಲ್ಲಿ 18ರಿಂದ 19ವರ್ಷದೊಳಗಿನ ಬಾಲಗರ್ಭಿಣಿಯರಾಗಿರುವ ಪ್ರಮಾಣ ಶೇ 8.5 ಇದ್ದು, ರಾಜ್ಯದ ಸರಾಸರಿ ಶೇ 7ರಷ್ಟಿದ್ದು ಇದು ಕೂಡಾ ಶೇ1.5 ಅಧಿಕವಾಗಿದೆ. ಈ ಎಲ್ಲ ಅಂಶಗಳನ್ನು ಗಮನಿಸಿದರೆ ತೀವ್ರ ಕಳವಳ ಹುಟ್ಟಿಸದೇ ಇರಲಾರದು. ಈ ನಿಟ್ಟಿನಲ್ಲಿ ಪ್ರತಿಯೊಬ್ಬರು ಎಚ್ಚೆತ್ತುಕೊಳ್ಳಬೇಕಾಗಿದೆ' ಎಂದರು.

ಯಲಬುರ್ಗಾ ತಹಶೀಲ್ದಾರ್ ಮುರಳಿಧರರಾವ್ ಕುಲಕರ್ಣಿ, ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿ ನೀಲಗಂಗಾ ಬಬಲಾದಿ, ಯಲಬುರ್ಗಾ ಶಿಶು ಅಭಿವೃದ್ಧಿ ಯೋಜನಾಧಿಕಾರಿ ಬೆಟ್ಟದೇಶ ಮಾಳೆಕೊಪ್ಪ, ಕಾರ್ಮಿಕ ನಿರೀಕ್ಷಕ ನಿವೇದಿತಾ, ತಾಲ್ಲೂಕು ವೈದ್ಯಾಧಿಕಾರಿ ಡಾ. ನೇತ್ರಾವತಿ ಹಿರೇಮಠ, ಪ್ರೌಢಶಾಲಾ ವಿಭಾಗ ವಲಯ ಸಂಪನ್ಮೂಲ ವ್ಯಕ್ತಿ ಶರಣಗೌಡ ಪೊಲೀಸ್‌ಪಾಟೀಲ್ ಸೇರಿ ಅನೇಕರು ಇದ್ದರು. ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ರಕ್ಷಣಾಧಿಕಾರಿ (ಸಾಂಸ್ಥಿಕ) ರವಿಕುಮಾರ ಪವಾರ ಸ್ವಾಗತಿಸಿ ಪ್ರಸ್ತಾವಿಕವಾಗಿ ಮಾತನಾಡಿದರು. ರಕ್ಷಣಾಧಿಕಾರಿ (ಅಸಾಂಸ್ಥಿಕ) ರವಿ ಬಡಿಗೇರ ನಿರೂಪಿಸಿದರು. ಆಫೀಸರ್ ಶಿವಲೀಲಾ ವನ್ನೂರು, ಪ್ರತಿಭಾ ಕಾಶಿಮಠ ವಿವಿಧ ವಿಷಯಗಳ ಕುರಿತು ಮಾಹಿತಿ ನೀಡಿದರು.

# ಕರ್ನಾಟಕ ಮಾಧ್ಯಮ ಅಕಾಡೆಮಿಯಿಂದ ಮೈಸೂರು ವಿಭಾಗ ಮಟ್ಟದ ಪತ್ರಕರ್ತರಿಗೆ ತರಬೇತಿ

**ನೈಜ್ಯ ದೆಸೆ ನ್ಯೂಸ್**

**ರಾಯಚೂರು: ಕರ್ನಾಟಕ ಮಾಧ್ಯಮ ಅಕಾಡೆಮಿಯು ಮೈಸೂರು ವಿಭಾಗ ಮಟ್ಟದ ಪತ್ರಕರ್ತರಿಗೆ ಸಂವಿಧಾನ ಮತ್ತು ಪತ್ರಿಕೋದ್ಯಮ, ಫ್ಯಾಕ್ಟ್ ಚೆಕ್ ಹಾಗೂ ಬದಲಾಗುತ್ತಿರುವ ಪತ್ರಿಕೋದ್ಯಮದಲ್ಲಿ ಭಾಷೆ ಬಳಕೆ ಕುರಿತಂತೆ ಫೆಬ್ರವರಿ 27 ರಂದು ಒಂದು ದಿನದ ತರಬೇತಿ ಕಾರ್ಯಕ್ರಮ ಆಯೋಜಿಸಿದೆ.**

ಕರ್ನಾಟಕ ಮಾಧ್ಯಮ ಅಕಾಡಮಿ
Karnataka Media Academy

ವೇಗವಾಗಿ ಬದಲಾಗುತ್ತಿರುವ ತಂತ್ರಜ್ಞಾನದ ಹಿನ್ನೆಲೆಯಲ್ಲಿ ಪತ್ರಕರ್ತರು ಈ ತಂತ್ರಜ್ಞಾನಗಳ ಸದ್ಬಳಕೆ ಮಾಡಿಕೊಳ್ಳುವ ನಿಟ್ಟಿನಲ್ಲಿ ಈ ತರಬೇತಿ ಸಹಕಾರಿಯಾಗಲಿದೆ ಎಂದು ಅಕಾಡೆಮಿಯ ಅಧ್ಯಕ್ಷೆ ಆಯೇಶಾ ಖಾನಂ ಅವರು ತಿಳಿಸಿದ್ದಾರೆ. ಈ ತರಬೇತಿ ಕಾರ್ಯಕ್ರಮದಲ್ಲಿ ಭಾಗವಹಿಸಲು ಇಚ್ಚಿಸುವ ಮೈಸೂರು, ಮಂಡ್ಯ, ಹಾಸನ, ಚಾಮರಾಜನಗರ, ಕೊಡಗು, ಚಿಕ್ಕಮಗಳೂರು, ದಕ್ಷಿಣ ಕನ್ನಡ, ಉಡುಪಿ ಜಿಲ್ಲೆಯ ಪತ್ರಕರ್ತರು ಗೂಗಲ್ ಫಾರ್ಮ್ https://forms.gle/ZJ4X7NjBodXmzeUu5 ನ್ನು ಭರ್ತಿ ಮಾಡಿ ದಿನಾಂಕ 20-02-2026ರೊಳಗೆ ಅರ್ಜಿ ಸಲ್ಲಿಸಬಹುದಾಗಿದೆ. ತರಬೇತಿಯ ಆಯ್ಕೆ ಕುರಿತಂತೆ ಅಕಾಡೆಮಿಯ ತೀರ್ಮಾನವೇ ಅಂತಿಮ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿದ್ಯುತ್ ಪರಿವರ್ತಕ ದುರಸ್ತಿ ಕೇಂದ್ರಕ್ಕೆ ಆಕಸ್ಮಿಕ ಬೆಂಕಿ

**ನೈಜ್ಯ ದೆಸೆ ನ್ಯೂಸ್**

**ಸಿರವಾರ: ಪಟ್ಟಣದ ರಾಯಚೂರು ರಸ್ತೆಯಲ್ಲಿರುವ ವಿದ್ಯುತ್ ಪರಿವರ್ತಕ ದುರಸ್ತಿ ಕೇಂದ್ರಕ್ಕೆ ಆಕಸ್ಮಿಕ ಬೆಂಕಿ ಬಿದ್ದು, ಬೆಂಕಿಗೆ ಪರಿವರ್ತಕಗಳು ಸಿಡಿದು ಗುರುವಾರ ಅಪಾರ ಪ್ರಮಾಣ ನಷ್ಟವುಂಟಾಗಿದೆ. ರೈತರು ಜಮೀನುಗಳಲ್ಲಿ ಭತ್ತ ಕಟಾವು, ನಂತರ ಉಳಿದ ತ್ಯಾಜ್ಯ ಸುಡಲು ಗುರುವಾರ ಬೆಂಕಿ ಹಚ್ಚಲಾಗಿತ್ತು.**



ಜಮೀನಿನ ಪಕ್ಕದಲ್ಲಿದ್ದ ವಿದ್ಯುತ್ ಪರಿವರ್ತಕ ದುರಸ್ತಿ ಕೇಂದ್ರಕ್ಕೆ ಗಾಳಿಯಿಂದ ಬೆಂಕಿ ತಗುಲಿ ಆಯಿಲ್ ಬ್ಯಾರಲ್‌ಗಳು, ವಿದ್ಯುತ್ ಪರಿವರ್ತಕಗಳು ಸುಟ್ಟುಭಸ್ಮವಾಗಿ 3 ಲಕ್ಷಕ್ಕೂ ಅಧಿಕ ನಷ್ಟವಾಗಿದೆ. ಬೆಂಕಿ ತಗುಲಿದ ತಕ್ಷಣ ಕೇಂದ್ರದಲ್ಲಿದ್ದ ಕೆಲಸಗಾರರು ಪರಾರಿಯಾಗಿದ್ದು, ಪ್ರಾಣಾಪಾಯ ಸಂಭವಿಸಿಲ್ಲ. ಸ್ಥಳಕ್ಕೆ ಅರಕೇರಾ ಅಗ್ನಿ ಶಾಮಕ ದಳದ ಸಿಬ್ಬಂದಿ ಆಗಮಿಸಿ, ಹೆಚ್ಚಿನ ಅನಾಹುತ ತಪ್ಪಿಸಿದ್ದಾರೆ.

ಅಗ್ನಿಶಾಮಕ ವಾಹನ ಮೀಸಲಿಗೆ ಒತ್ತಾಯ: ಬೇಸಿಗೆ ಪ್ರಾರಂಭವಾಗುತ್ತಿದ್ದು, ಬಿಸಿಲು ಸೇ-ರಿದಂತೆ ಅಕಸ್ಮಿಕ ಬೆಂಕಿ ಅವಘಡಗಳು ಸಂಭವಿಸುವುದು ಸಾಮಾನ್ಯ. ಅದಕ್ಕಾಗಿ ಸ್ಥಳೀಯ ಪೊಲೀಸ್ ಠಾಣೆಯಲ್ಲಿ ಒಂದು ಅಗ್ನಿ ಶಾಮಕ ವಾಹನ ಮತ್ತು ತಂಡವನ್ನು ಪಟ್ಟಣದಲ್ಲಿಯೇ ಮೀಸಲಿಟ್ಟರೆ, ತಕ್ಷಣಕ್ಕೆ ಅಗ್ನಿ ಅವಘಡ ನಡೆದಾಗ ಹೆಚ್ಚಿನ ಅನಾಹುತ ತಪ್ಪಿಸಲು ಅನುಕೂಲ ಮಾಡಿಕೊಡಬೇಕು ಎಂದು ಸಾರ್ವಜನಿಕರ ಒತ್ತಾಯವಾಗಿದೆ.

# ವಿರೋಧ ಪಕ್ಷದ ನಾಯಕ ಸ್ಥಾನವನ್ನು ಪ್ರಾಮಾಣಿಕವಾಗಿ ನಿಭಾಯಿಸಿದ ರಾಹುಲ್ ಗಾಂಧಿ. ರವಿ ಭೋಸರಾಜು

**ನೈಜ್ಯ ದೆಸೆ ನ್ಯೂಸ್**

**ಭಾರತೀಯ ಸಂಸದೀಯ ವ್ಯವಸ್ಥೆಯಲ್ಲಿ ವಿರೋಧ ಪಕ್ಷದ ನಾಯಕನ ಸ್ಥಾನವು ಅತ್ಯಂತ ಜವಾಬ್ದಾ-ರಿಯುತವಾದದ್ದು. ಇತ್ತೀಚಿನ ದಿನಗಳಲ್ಲಿ ರಾಹುಲ್ ಗಾಂಧಿ ಅವರು ಈ ಜವಾಬ್ದಾರಿಯನ್ನು ನಿಭಾಯಿಸುತ್ತಿರುವ ರೀತಿ ನಿಜಕ್ಕೂ ಗಮನಾರ್ಹವಾಗಿದೆ.**

ಪ್ರತಿ ಬಾರಿಯೂ ಸಂವಿಧಾನದ ಪ್ರತಿಯನ್ನು ಹಿಡಿದು ಚರ್ಚೆಗೆ ಬರುವ ಅವರು, ದೇಶದ ಪ್ರಜಾಪ್ರಭುತ್ವದ ಮೌಲ್ಯಗಳನ್ನು ಎತ್ತಿಹಿಡಿಯುವಲ್ಲಿ ಕಟಿಬದ್ಧರಾಗಿದ್ದಾರೆ ಎಂಬ ಸಂದೇಶವನ್ನು ನೀಡುತ್ತಿದ್ದಾರೆ. ಸರ್ಕಾರದ ವೈಫಲ್ಯಗಳನ್ನು ಅಂಕಿ-ಅಂಶಗಳ ಸಮೇತ ಪ್ರಶ್ನಿಸುವ ಮೂಲಕ ಆಡಳಿತ ಪಕ್ಷಕ್ಕೆ ತಕ್ಕ ಉತ್ತರ ನೀಡುತ್ತಿದ್ದಾರೆ. ಇತ್ತೀಚಿನ ಅಧಿವೇಶನದ ಆಕ್ರಮಣಕಾರಿ ಧಾಟಿ ಮೊನ್ನೆಯ ಅಧಿವೇಶನದಲ್ಲಿ ರಾಹುಲ್ ಗಾಂಧಿಯವರು ಅತ್ಯಂತ ಕಟುವಾದ ಟೀಕೆಗಳನ್ನು ಮಾಡುವ ಮೂಲಕ ಸುದ್ದಿಯಾದರು. ಪ್ರಧಾನಿ ಮೋದಿಯವರ ವಿರುದ್ಧ ವಾಗ್ದಾಳಿ ನಡೆಸುತ್ತಾ, ಅಂತರಾಷ್ಟ್ರೀಯ ಮಟ್ಟದ ವಿವಾದಿತ ವಿಷಯಗಳನ್ನು ಪ್ರಸ್ತಾಪಿಸಿದ್ದು ಆಡಳಿತ ಪಕ್ಷವನ್ನು ಇಕ್ಕಟ್ಟಿಗೆ ಸಿಲುಕಿಸಿದ್ದು ಸುಳ್ಳಲ್ಲ.



ರಾಹುಲ್ ಗಾಂಧಿ ಕಟುವಾಗಿ ಟೀಕಿಸುತ್ತಿದ್ದಾರೆ.

ಅಮೇರಿಕಾದ ರಾಜಕೀಯ ವಿದ್ಯಮಾನಗಳು ಮತ್ತು ಅಲ್ಲಿನ ವಿವಾದಿತ 'ಎಪ್‌ಸ್ಟೀನ್ ಫೈಲ್'ಗಳ ವಿಷಯವನ್ನು ಉಲ್ಲೇಖಿಸಿ, ಪ್ರಧಾನಿ ಮೋದಿಯವರ ವಿದೇಶಿ ನಾಯಕರೊಂದಿಗಿನ ಬಾಂಧವ್ಯವನ್ನು ಜಾಗತಿಕ ಮಟ್ಟದಲ್ಲಿ ವಿವಾದಕ್ಕೊಳಗಾದ ವ್ಯಕ್ತಿಗಳೊಂದಿಗೆ ಭಾರತದ ನಾಯಕತ್ವವನ್ನು ತಳಕುಹಾಕಿ ಮಾತನಾಡುವ ಮೂಲಕ, ಸರ್ಕಾರದ ನೈತಿಕತೆಯನ್ನು ಅವರು ಪ್ರಶ್ನಿಸುತ್ತಿದ್ದಾರೆ. ಸೇನೆಯ ಮಾಜಿ ಮುಖ್ಯಸ್ಥ ಜನರಲ್ ಎಂ. ಎಂ. ನರವಾಣೆ ಅವರ 'ಫೋರ್ ಸ್ಟಾರ್ಸ್ ಆಫ್ ಡೆಸ್ಟಿನಿ' ಪುಸ್ತಕದಲ್ಲಿನ ಅಂಶಗಳನ್ನು ರಾಹುಲ್ ಗಾಂಧಿಯವರು ಸದನದ ಮುಂದೆ ತಂದ ರೀತಿ ಅತ್ಯಂತ ತೀಕ್ಷ್ಣವಾಗಿತ್ತು.

"ಸೇನೆಯ ಮುಖ್ಯಸ್ಥರಿಗೇ ಅಗ್ನಿಪಥ್ ಯೋಜನೆಯ ಬಗ್ಗೆ ಗೊತ್ತಿರಲಿಲ್ಲ, ಇದು ಅವ-ರಿಗೆ ಸಿಡಿಲು ಬಡಿದಂತಾಗಿತ್ತು" ಎಂಬ ನರವಾಣೆಯವರ ಬರಹವನ್ನು ಉಲ್ಲೇಖಿಸಿ, ಸರ್ಕಾರವು ಸೇನೆಯನ್ನಾಗಲಿ ಅಥವಾ ಅದರ ನಾಯಕರನ್ನಾಗಲಿ ವಿಶ್ವಾಸಕ್ಕೆ ತೆಗೆದುಕೊಳ್ಳದೆ ಏಕಪಕ್ಷೀಯ ನಿರ್ಧಾರಗಳನ್ನು ತೆಗೆದುಕೊಳ್ಳುತ್ತಿದೆ ಎಂದು ಅವರು "ಚಾಟಿ" ಬೀಸಿದರು. ದೇಶದ ಭದ್ರತೆಯ ವಿಷಯದಲ್ಲಿ ಸರ್ಕಾರದ ಅಪಕ್ವತೆಯನ್ನು ಈ ಮೂಲಕ ಬಯಲಿಗೆಳೆದರು. ಈ ಹಿಂದೆಂದಿಗಿಂತಲೂ ಹೆಚ್ಚು ಧೈರ್ಯದಿಂದ ಕಟುವಾಗಿ ಟೀಕಿಸುವ ಭಾಷೆಯನ್ನು ಬಳಸುವ ಮೂಲಕ, ತಾವು ಇನ್ನು ಮುಂದೆ ಮೃದು ಧೋರಣೆ ತಳೆಯುವುದಿಲ್ಲ ಎಂಬ ಸ್ಪಷ್ಟ ಸಂದೇಶ ರವಾನಿಸಿದರು. ಒಟ್ಟಾರೆಯಾಗಿ, ರಾಹುಲ್ ಗಾಂಧಿ ಅವರು ಇಂದು ಕೇವಲ ಒಬ್ಬ ಸಂಸದರಾಗಿ ಉಳಿಯದೆ, ಆಡಳಿತ ಪಕ್ಷದ ಲೋಪದೋಷಗಳನ್ನು ಎತ್ತಿ ತೋರಿಸುವ ಶಕ್ತಿಯುತ "ಚೆಕ್ ಅಂಡ್ ಬ್ಯಾಲೆನ್ಸ್" ಆಗಿ ಕಾರ್ಯನಿರ್ವಹಿಸುತ್ತಿದ್ದಾರೆ.

## ಸಾಹಿತ್ಯ ಸಿಂಚನ

ಪೋಷಕರು
ತಾಯಿಯ ಮಮತೆಯ ನೆರಳಲ್ಲಿ,
ಬಾಳು ಹೂವಾಗಿ ಅರಳಿತು,
ತಂದೆಯ ಶ್ರಮದ ಬೆವರಿನಲ್ಲಿ,
ನಮ್ಮ ಕನಸುಗಳು ಬೆಳಗಿತು.

ಹಸಿವಿನ ನೋವು ಮರೆತು,
ನಮಗೆ ತುತ್ತು ನೀಡಿದವರು,
ನಮ್ಮ ದುಃಖವನ್ನು ತನ್ನದಾಗಿ ಮಾಡಿಕೊಂಡು,
ನಗುವಿನ ದಾರಿ ತೋರಿದವರು.

ಬಿದ್ದಾಗ ಕೈ ಹಿಡಿದು ಎತ್ತಿದವರು,
ಸೋತಾಗ ಧೈರ್ಯ ತುಂಬಿದವರು,
ನಮ್ಮ ಯಶಸ್ಸಿನ ಹಿಂದೆ ನಿಂತು,
ನಿಶ್ಶಬ್ದವಾಗಿ ಸಂತೋಷಪಟ್ಟವರು.

ಪ್ರೀತಿಯೇ ಅವರ ಭಾಷೆ,
ತ್ಯಾಗವೇ ಅವರ ಗುರುತು,
ಈ ಜನ್ಮದಲ್ಲಿ ದೊರೆತ ವರವೇ
ನಮ್ಮ ಪೋಷಕರ ಅಮೂಲ್ಯ ಬಂಧು.

ರಮೇಶ ಹೆಚ್

## ಖಾಸ್ಗತೇಶ್ವರ ಮಠದ ಪೂಜ್ಯ ಸಿದ್ದಲಿಂಗ ಶ್ರೀಗಳಿಗೆ ಸನ್ಮಾನ

ನೈಜ್ಯ ದೆಸೆ ನ್ಯೂಸ್

**ತಾಳಿಕೋಟಿ: ಪಟ್ಟಣದ ಶ್ರೀ ರಾಘವೇಂದ್ರ ಗ್ರಾಮೀಣಾಭಿವೃದ್ಧಿ ಶಿಕ್ಷಣ ಸಂಸ್ಥೆ(ರಿ) ಇದರ ಅಡಿಯಲ್ಲಿ ನಡೆಯುತ್ತಿರುವ ವಿ.ಕೆ. ಎಚ್. ಆಂಗ್ಲ ಮಾಧ್ಯಮ ಪ್ರಾಥಮಿಕ ಶಾಲೆಯ ವಾರ್ಷಿಕೋತ್ಸವ ಸಮಾರಂಭದಲ್ಲಿ ಖಾಸ್ಗತೇಶ್ವರ ಮಠದ ಪರಮ ಪೂಜ್ಯ ಶ್ರೀ ಸಿದ್ದಲಿಂಗ ಮಹಾಸ್ವಾಮಿಗಳಿಗೆ ಗೌರವ ಸಮರ್ಪಣೆ ಸಲ್ಲಿಸಲಾಯಿತು.**



ದೇವರ ಹಿಪ್ಪರಗಿ ಶಾಸಕ ರಾಜುಗೌಡ ಪಾಟೀಲ, ಸಂಸ್ಥೆಯ ಅಧ್ಯಕ್ಷ ಪ್ರಲ್ಹಾದ ವಿ.ಹಜೇರಿ, ಕ್ಷೇತ್ರ ಸಮನ್ವಯಾಧಿಕಾರಿ ಆರ್.ಬಿ.ದಮ್ಮೂರ ಮಠ,ಸಿಆರ್.ಸಿ.ರಾಜು ವಿಜಾಪುರ, ನಿರ್ದೇಶಕ ಸಲಾವುದ್ದೀನ ಇರ್ಫಾನ ಖಾಜಿ ಮತ್ತಿತರರು ಇದ್ದರು.

## ಬಿ.ಆರ್.ಅಂಬೇಡ್ಕರ್ ವೃತ್ತದಲ್ಲಿ ಕಾಮಗಾರಿ: ಸಾರ್ವಜನಿಕರ ಸಹಕಾರಕ್ಕೆ ಮನವಿ

ನೈಜ್ಯ ದೆಸೆ ನ್ಯೂಸ್

**ರಾಯಚೂರು: ರಾಯಚೂರು ನಗರದ ಡಾ.ಬಿ.ಆರ್.ಅಂಬೇಡ್ಕರ್ ವೃತ್ತದ ಸುಂದರೀಕರಣ ಮತ್ತು ಅಭಿವೃದ್ಧಿ ಕಾರ್ಯಗಳನ್ನು ಲೋಕೋಪಯೋಗಿ ಇಲಾಖೆ ವತಿಯಿಂದ ಭಾರತೀಯ ಸಂಸತ್ ಭವನದ ಮಾದರಿಯಲ್ಲಿ ಕೈಗೊಳ್ಳಲಾಗುತ್ತಿದೆ.**

ವೃತ್ತದಲ್ಲಿರುವ ಡಾ.ಬಿ.ಆರ್.ಅಂಬೇಡ್ಕರ್ ಅವರ ಪ್ರತಿಮೆ ಹಳೆಯದಾಗಿ ಹಾಗೂ ದುರ್ಬಲ ಸ್ಥಿತಿಯಲ್ಲಿರುವುದರಿಂದ ಅಭಿವೃದ್ಧಿ ಕಾಮಗಾರಿಗಳನ್ನು ಪ್ರಾರಂಭಿಸಲು ಈಗಿರುವ ಪ್ರತಿಮೆಯನ್ನು ಮುಂದಿನ 3 ದಿನಗಳೊಳಗೆ ಸುರಕ್ಷಿತವಾಗಿ ತೆರವುಗೊಳಿಸುವುದು ಅಗತ್ಯವಾಗಿದೆ. ಇದೇ ವೇಳೆ ರಾಯಚೂರು ಮಹಾನಗರ ಪಾಲಿಕೆಯಿಂದ ಅದೇ ಸ್ಥಳದಲ್ಲಿ ಹೊಸದಾಗಿ ಭವ್ಯವಾದ ಡಾ.ಬಿ.ಆರ್.ಅಂಬೇಡ್ಕರ್ ಅವರ ಪ್ರತಿಮೆಯನ್ನು ಸ್ಥಾಪಿಸಲು ಸಿದ್ಧತೆಗಳನ್ನು ನಡೆಸಲಾಗುತ್ತಿದೆ. ಈ ವಿಷಯಕ್ಕೆ ಸಂಬಂಧಿಸಿದಂತೆ ಜಿಲ್ಲಾಧಿಕಾರಿಗಳು ಹಾಗೂ ಮಹಾನಗರ ಪಾಲಿಕೆಯ ಆಯುಕ್ತರ ಅಧ್ಯಕ್ಷತೆಯಲ್ಲಿ ಸಾರ್ವಜನಿಕ ಪ್ರತಿನಿಧಿಗಳು, ಸ್ಥಳೀಯ ಮುಖಂಡರು, ವಿವಿಧ ಸಮುದಾಯ ಸಂಘಟನೆಗಳೊಂದಿಗೆ ಸಭೆಗಳನ್ನು ನಡೆಸಲಾಗಿದ್ದು, ನಗರದ ಎಲ್ಲಾ ನಾಗರಿಕರು ಸಾರ್ವಜನಿಕ ಹಿತಾಸಕ್ತಿಯ ಈ ಅಭಿವೃದ್ಧಿ ಕಾರ್ಯಕ್ಕೆ ಸಹಕಾರ ನೀಡಬೇಕು ಹಾಗೂ ಕಾಮಗಾರಿ ಸುಗಮವಾಗಿ ನಡೆಯಲು ಸಹಯೋಗ ನೀಡುವಂತೆ ರಾಯಚೂರು ಮಹಾನಗರ ಪಾಲಿಕೆ ಆಯುಕ್ತರಾದ ಜುಬಿನ್ ಮೊಹಪಾತ್ರ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕುಷ್ಟರೋಗಕ್ಕೆ. ಎಂ .ಡಿ.ಟಿ. ಚಿಕಿತ್ಸೆ ಕೊಡಿಸಿ ಕುಷ್ಠರೋಗ ನಿರ್ಮೂಲನಾ ಮಾಡಲು ಸಹಕರಿಸಿ :ಡಾಕ್ಟರ ಪ್ರೀತಾ ಪಾಟೀಲ ವೈದ್ಯಾಧಿಕಾರಿಗಳು

ನೈಜ್ಯ ದೆಸೆ ನ್ಯೂಸ್

**ಸಿಂಧನೂರು: ಜಿಲ್ಲಾಡಳಿತ ಜಿಲ್ಲಾ ಪಂಚಾಯತ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ರಾಯಚೂರು ಪ್ರಾಥಮಿಕ ಆರೋಗ್ಯ ಕೇಂದ್ರ ಜವಳಗೇರಾ. ಸಂತ ಅಂತೋನಿಯಾರ ಹಿರಿಯ ಪ್ರಾಥಮಿಕ ಶಾಲೆ ಜವಳಗೇರಾ ಇವರ ಸಂಯುಕ್ತ ಆಶ್ರಯದಲ್ಲಿ ಕುಷ್ಟರೋಗ ಕುರಿತು ವಿದ್ಯಾರ್ಥಿಗಳಲ್ಲಿ ಜಾಗೃತಿ ಮೂಡಿಸುವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿತ್ತು.**




ಡಾಕ್ಟರ ಪ್ರೀತಾ ಪಾಟೀಲ ಅವರು ಮಾತನಾಡಿ ಕುಷ್ಟರೋಗ ಶಾಪವಲ್ಲ ಪಾಪುವಲ್ಲ ಯಾವುದೇ ಮೂಡನಂಬಿಕೆಗೆ ಬಲಿಯಾಗದೆ ಸರಕಾರಿ ಆಸ್ಪತ್ರೆಯಲ್ಲಿ ಸೂಕ್ತ ಚಿಕಿತ್ಸೆ ಕೊಡಿಸಿ ಎಂದರು, ನಂತರ ಮಾತನಾಡಿದ ಈಶ್ವರ ದಾಸಪ್ಪನವರು ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿಗಳು ಅವರು ಮಾತನಾಡಿ ಮಹಾತ್ಮ ಗಾಂಧೀಜಿಯವರ ಪುಣ್ಯ ಸ್ಮರಣೆ ದಿನದಂದ್ದು ಅವರನ್ನು ಸ್ಮರಿಸುತ್ತಾ, ಅವರು ಕಂಡಿದ್ದ ಕುಷ್ಟರೋಗ ಮುಕ್ತ ಭಾರತವನ್ನು ಮಾಡಲು ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ. ಕುಷ್ಠರೋಗ ಚರ್ಮ ಮತ್ತು ನರಗಳಿಗೆ ಬರುವಂತಹ ಕಾಯಿಲೆ ಪ್ರಾರಂಭ ಹಂತದಲ್ಲಿ ಕಂಡುಹಿಡಿದು ಬೇಗನೆ ಚಿಕಿತ್ಸೆ ಪಡೆದುಕೊಳ್ಳುವ ಮೂಲಕ ಆರೋಗ್ಯವಾಗಿರಬಹುದಾಗಿದೆ. ಕುಷ್ಟರೋಗದ ಲಕ್ಷಣಗಳಾದ ತಿಳಿ ಬಳಿ ತಾಮ್ರ ಬಣ್ಣದ ಸ್ಪರ್ಶಜ್ಞಾನ ಇಲ್ಲದ ಮಚ್ಚೆಗಳು ಮಚ್ಚೆಯ ಮೇಲೆ ಕೂದಲು ಇಲ್ಲದಿರುವುದು ಮತ್ತು ಸ್ಪರ್ಶವನ್ನು ಕಳೆದುಕೊಂಡಿರುವುದು ಹಾಗೂ ನರಗಳಲ್ಲಿ ಜೂಮ್ ಹಿಡಿಯುವುದು ಕುಷ್ಟರೋಗದ ಲಕ್ಷಣವಾಗಿರುತ್ತದೆ.

ಇಂಥ ಲಕ್ಷಣಗಳು ಕಂಡು ಬಂದರೆ ಹತ್ತಿರದ ಸರ್ಕಾರಿ ಆಸ್ಪತ್ರೆಯಲ್ಲಿ ಪರೀಕ್ಷೆ ಮಾಡಿಸಿಕೊಂಡು ರೋಗ ಖಚಿತಪಟ್ಟರೆ ಚಿಕಿತ್ಸೆಯನ್ನು ಉಚಿತವಾಗಿ ನೀಡಲಾಗುತ್ತದೆ. ಯಾವುದೇ ಭಯಭೀತರಾಗದೆ ಕಳಂಕಕ್ಕೆ ಒಳಗಾಗದೆ ಸೂಕ್ತವಾದ ಚಿಕಿತ್ಸೆಯನ್ನು ಪಡೆದುಕೊಂಡು ಆರೋಗ್ಯವಂತರಾಗಿರಬೇಕು ಎಂದು ಕುಷ್ಠರೋಗ ನಿರ್ಮೂಲನಾ ಕುರಿತು ವಿದ್ಯಾರ್ಥಿಗಳಿಗೆ ಪ್ರತಿಜ್ಞಾವಿಧಿ ಬೋಧಿಸಿದರು. ಈ ಸಂದರ್ಭದಲ್ಲಿ ಸಂತ ಅಂತೋನಿಯಾರ ಹಿರಿಯ ಪ್ರಾಥಮಿಕ ಶಾಲೆ ಜವಳಗೇರಾದ ಮುಖ್ಯೋಪಾಧ್ಯಾಯರಾದ ಸಿಸ್ಟರ್ ಮೇರಿ ಉಪ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿಗಳು ಬಸ್ಸಯ್ಯ ಹಾಗೂ ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಾಲಪ್ಪ ನಾಯಕ ಹಾಗೂ ಆರೋಗ್ಯ ನಿರೀಕ್ಷಣಾಧಿಕಾರಿಗಳಾದ ಮಹೇಶ. ಅಂಬಮ್ಮ ಹಾಗೂ, ಶಿಕ್ಷಕರಾದ ಮೀನಾ. ವಿದ್ಯಾರ್ಥಿ ವಿದ್ಯಾರ್ಥಿನಿಯರು ಉಪಸ್ಥಿತರಿದ್ದರು.

# ಡಿ ಐ ಜಿ ಪುಟ್ಟಮಾದಯ್ಯ ಎಂ ಅವರಿಗೆ ಗೌರವ ಸನ್ಮಾನ



ನೈಜ್ಯ ದೆಸೆ ನ್ಯೂಸ್

**ಕಲಬುರುಗಿ: ಪೊಲೀಸ್ ಇಲಾಖೆಯಲ್ಲಿ ದಕ್ಷತೆ, ನಿಷ್ಠೆ ಮತ್ತು ಅಸಾಧಾರಣ ಧೈರ್ಯದಿಂದ ಸೇವೆ ಸಲ್ಲಿಸಿರುವ ಡಿಐಜಿಪಿ ಹಾಗೂ ಪಿಟಿಸಿ ಪ್ರಾಂಶುಪಾಲರಾದ ಶ್ರೀಯುತ ಎಂ. ಪುಟ್ಟಮಾದಯ್ಯ ಅವರಿಗೆ 77ನೇ ಗಣರಾಜ್ಯೋತ್ಸವದ ಅಂಗವಾಗಿ 2026ನೇ ಸಾಲಿನ ಪೊಲೀಸ್ ಶ್ರೇಣಿಯ ಅತ್ಯುನ್ನತ "ಶ್ಲಾಘನೀಯ ಸೇವಾ ರಾಷ್ಟ್ರಪತಿ ಪದಕ" ಲಭಿಸಿರುವ ಹಿನ್ನೆಲೆ ಗುರುವಾರ ಕಲಬುರುಗಿಯಲ್ಲಿ ಭಾವಪೂರ್ಣ ಸನ್ಮಾನ ಕಾರ್ಯಕ್ರಮ ನಡೆಯಿತು.**

ಬೆಳಕು ಸಂಸ್ಥೆಯ ಅಧ್ಯಕ್ಷರಾದ ಅಣ್ಣಪ್ಪ ಮೇಟಿಗೌಡ, ಕಾರುಣ್ಯ ಆಶ್ರಮದ ಡಾ. ಚನ್ನಬಸವಸ್ವಾಮಿ ಹಾಗೂ ಸ್ವಾಮಿ ಚಾರಿಟೇಬಲ್ ಟ್ರಸ್ಟ್ ಅಧ್ಯಕ್ಷರಾದ ಡಾ. ಮಲ್ಲಿಕಾರ್ಜುನ ಸ್ವಾಮಿ ಅವರು ಶ್ರೀಯುತ ಪುಟ್ಟಮಾದಯ್ಯ ಅವರಿಗೆ ಸನ್ಮಾನಿಸಿ ಅಭಿನಂದನೆ ಸಲ್ಲಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಗಣ್ಯರು, ಪೊಲೀಸ್ ಅಧಿಕಾರಿಯಾಗಿ ದೀರ್ಘಕಾಲ ಶ್ರೇಷ್ಠ ಕಾರ್ಯನಿರ್ವಹಣೆ ಮಾಡಿರುವುದು ಮಾತ್ರವಲ್ಲದೆ, ಸಾರ್ವಜನಿಕ ಸೇವೆಯಲ್ಲಿ ತೋರಿದ ನಿಷ್ಠೆ ಮತ್ತು ಸಮರ್ಪಣಾಭಾವವೇ ಅವರಿಗೆ ಈ ಮಹತ್ವದ ರಾಷ್ಟ್ರಪತಿ ಪದಕ ತಂದುಕೊಟ್ಟಿದೆ ಎಂದು ಪ್ರಶಂಸಿಸಿದರು. ಇಂತಹ ಅಧಿಕಾರಿಗಳು ಸಮಾಜಕ್ಕೆ ಮಾದರಿಯಾಗಿದ್ದು, ಯುವ ಅಧಿಕಾರಿಗಳಿಗೆ ಪ್ರೇರಣೆಯಾಗಿದ್ದಾರೆ.

ಮತ್ತು ನಮ್ಮ ಕರ್ನಾಟಕ ರಾಜ್ಯದಲ್ಲಿ ಕಾರುಣ್ಯ ಎನ್ನುವ ಕರುಣೆಯ ಕುಟುಂಬಕ್ಕೆ ಆದಷ್ಟು ಬೇಗನೆ ಸರ್ಕಾರದ ಸ್ವಂತ ನಿವೇಶನ ಹಾಗೂ ಅನುದಾನ ಸಿಗದೆ ಎನ್ನುವುದು ನನ್ನ ವೈಯಕ್ತಿಕ ಪ್ರಾರ್ಥನೆಯಾಗಿದೆ ಎಂದು ಎಂ ಪುಟ್ಟ ಮಾದಯ್ಯ ಅವರು ಅಭಿಪ್ರಾಯಪಟ್ಟು ಅಷ್ಟು ದೂರದಿಂದ ಬಂದು ನನ್ನನ್ನು ಸನ್ಮಾನಿಸಿರುವುದು ನನಗೆ ತುಂಬಾ ಸಂತೋಷವಾಗಿದೆ ಎಂದು ತಿಳಿಸಿದರು. ಕಾರ್ಯಕ್ರಮದಲ್ಲಿ ಕಲಬುರಗಿ ವಿಭಾಗದ ಅಸಿಸ್ಟೆಂಟ್ ಕಾಮಾಂಡೆಂಟ್ ಚನ್ನಬಸವ ಮೇಟಿಗೌಡ, ಬೀರಪ್ಪ, ಮಹೇಶ್, ಅಂಬು ಪಾಟೀಲ್, ಶರಣಬಸವ,ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ತಾಲ್ಲೂಕು ಮಟ್ಟದ ಗ್ರಾಮೀಣ ಪತ್ರಕರ್ತರಿಗೆ ಉಚಿತ ಬಸ್ ಪಾಸ್ ನೀಡಲು ಅರ್ಜಿ ಆಹ್ವಾನ

ನೈಜ್ಯ ದೆಸೆ ನ್ಯೂಸ್

**ರಾಯಚೂರು: ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಮಾಧ್ಯಮ ಪಟ್ಟಿಯಲ್ಲಿರುವ ಮಾಧ್ಯಮ ಸಂಸ್ಥೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ತಾಲ್ಲೂಕು ಮಟ್ಟದ ಪತ್ರಕರ್ತರು ತಮ್ಮ ವೃತ್ತಿ ನಿರತ ಚಟುವಟಿಕೆಗಳ ಸಂಬಂಧ ತಮ್ಮ ಜಿಲ್ಲಾದ್ಯಂತ ಉಚಿತವಾಗಿ ಸಂಚರಿಸಲು ಅನುಕೂಲವಾಗುವಂತೆ ಉಚಿತ ಬಸ್ ಪಾಸ್ ನೀಡಲು ಅರ್ಜಿಗಳನ್ನು ಆಹ್ವಾನಿಸಲಾಗಿದೆ.**

ಪತ್ರಕರ್ತರು ತಾವು ಕಾರ್ಯನಿರ್ವಹಿಸುತ್ತಿರುವ ಮಾಧ್ಯಮ ಸಂಸ್ಥೆಗಳಿಂದ ಸೇವಾ ಪ್ರಮಾಣಪತ್ರ, ಶಿಫಾರಸ್ಸು ಪತ್ರ ಮತ್ತು 11 ತಿಂಗಳುಗಳ ವೇತನಪತ್ರ (ಲೈನೇಜ್/ಸಂಭಾವನೆ/ಕಮೀಷನ್ ಪಡೆದಿರುವ ದಾಖಲೆ)ಗಳನ್ನು ಅಥವಾ ವೇತನ ಜಮಾ ಆಗಿರುವ ಮಾಹಿತಿ ಇರುವಂತಹ ಬ್ಯಾಂಕ್ ಸ್ಟೇಟಮೆಂಟ್ ಲಗತ್ತಿಸಿ ಸೇವಾಸಿಂಧು ಪೋರ್ಟಲ್ (https://sevasindhu.karnataka.gov.in) ಮೂಲಕ ಆನ್ ಲೈನ್ ನಲ್ಲಿ ಅರ್ಜಿಗಳನ್ನು ಸಲ್ಲಿಸಬಹುದು. ಆನ್ ಲೈನ್ ನಲ್ಲಿ ಸಲ್ಲಿಸಲಾದ ಅರ್ಜಿ ಮತ್ತು ಲಗತ್ತಿಸಲಾಗಿರುವ ದಾಖಲೆಗಳ ಒಂದು ಪ್ರತಿಯನ್ನು ಆಯಾ ಜಿಲ್ಲೆಯ ವಾರ್ತಾಧಿಕಾರಿಗಳ ಕಚೇರಿಗೆ ಸಲ್ಲಿಸಬೇಕು.

ಸ್ವೀಕೃತ ಅರ್ಜಿಗಳನ್ನು ಆಯ್ಕೆ ಸಮಿತಿಯ ಸಭೆಯಲ್ಲಿ ಪರಿಶೀಲಿಸಿ ಬಸ್ ಪಾಸ್ ಮಂಜೂರು ಮಾಡಲಾಗುತ್ತದೆ. ರಾಜ್ಯದ ಎಲ್ಲ ತಾಲ್ಲೂಕುಗಳ ಅರ್ಹ ಪತ್ರಕರ್ತರು ಕೂಡಲೇ ಸೇವಾಸಿಂಧು ಪೋರ್ಟಲ್ ಮೂಲಕ ಅರ್ಜಿಗಳನ್ನು ಸಲ್ಲಿಸುವುದರ ಮೂಲಕ ಈ ಸದುಪಯೋಗ ಪಡೆದುಕೊಳ್ಳಬಹುದು ಎಂದು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಆಯುಕ್ತರಾದ ಹೇಮಂತ್ ನಿಂಬಾಳ್ಕರ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸ್ಪೀಡ್ ಪೋಸ್ಟ್, ಇತರ ಪತ್ರ, ಪಾರ್ಸೆಲ್‌ಗಳ ಬುಕ್ಕಿಂಗ್ ಅವಧಿ ವಿಸ್ತರಣೆ




ನೈಜ್ಯ ದೆಸೆ ನ್ಯೂಸ್

**ರಾಯಚೂರು: ಸಾರ್ವಜನಿಕರ ಅನುಕೂಲಕ್ಕಾಗಿ, ಭಾರತೀಯ ಅಂಚೆ ಇಲಾಖೆಯಿಂದ ಎಲ್ಲಾ ಇಲಾಖಾ ಅಂಚೆ ಕಚೇರಿಗಳಲ್ಲಿ ಕಚೇರಿ ಕಾರ್ಯ ಸಮಯ ಮುಕ್ತಾಯವಾಗುವ ಮೊದಲು ಕೊನೆಯ 30 ನಿಮಿಷಗಳವರೆಗೆ ಅಂಚೆ ವಸ್ತುಗಳನ್ನು ಬುಕ್ ಮಾಡುವ ಸೌಲಭ್ಯವನ್ನು ಒದಗಿಸಲಾಗುತ್ತಿದೆ ಎಂಬುದನ್ನು ಸಾರ್ವಜನಿಕರಿಗೆ ತಿಳಿಸಲಾಗುತ್ತಿದೆ.**

ಈ ವ್ಯವಸ್ಥೆಯಡಿ, ಕಾರ್ಯದಿನಗಳಲ್ಲಿ ಇಲಾಖಾ ಅಂಚೆ ಕಚೇರಿಗಳ ನಿಗದಿತ ಕಾರ್ಯಾವಧಿ ಮುಕ್ತಾಯಕ್ಕೆ ಮುಂಚಿತವಾಗಿ 30 ನಿಮಿಷಗಳವರೆಗೆ ಸ್ಪೀಡ್ ಪೋಸ್ಟ್, ಪಾರ್ಸೆಲ್ ಹಾಗೂ ಅಂತಾರಾಷ್ಟ್ರೀಯ ಸ್ಪೀಡ್ ಪೋಸ್ಟ್, ಪಾರ್ಸೆಲ್‌ಗಳನ್ನು ಬುಕ್ ಮಾಡಬಹುದಾಗಿದೆ. ಇದರಿಂದ ಕಚೇರಿ ಸಮಯದ ಅಂತ್ಯದಲ್ಲಿ ಅಂಚೆ ಕಚೇರಿಗೆ ಬರುವ ಗ್ರಾಹಕರಿಗೂ ತಮ್ಮ ಅಂಚೆ ವಸ್ತುಗಳನ್ನು ಸುಲಭವಾಗಿ ಬುಕ್ ಮಾಡುವ ಅವಕಾಶ ದೊರೆಯುತ್ತದೆ. ಮನೆಯಲ್ಲಿಯೇ ಕುಳಿತು ಪತ್ರ, ಪಾರ್ಸೆಲ್‌ಗಳ ಬುಕ್ಕಿಂಗ್ ಸೌಲಭ್ಯ (Customer Self Service Portal): ಸಾರ್ವಜನಿಕರ ಸೌಕರ್ಯಕ್ಕಾಗಿ ಭಾರತೀಯ ಅಂಚೆ ಇಲಾಖೆಯ ಗ್ರಾಹಕ ಸ್ವಯಂ ಸೇವಾ ಪೋರ್ಟಲ್ https://app.indiapost.gov.in/customer-selfservice/login) ಲಭ್ಯವಿದ್ದು, ಇದರ ಮೂಲಕ ಅಂಚೆ ವಸ್ತುಗಳ ಬುಕ್ಕಿಂಗ್, ಟ್ರ?ಯಾಕಿಂಗ್, ದೂರು ಸಲ್ಲಿಕೆ, ಸೇವೆಗಳ ವಿವರಗಳು ಹಾಗೂ ಇತರೆ ಅನೇಕ ಸೇವೆಗಳನ್ನು ಆನ್‌ಲೈನ್‌ನಲ್ಲೇ ಪಡೆಯಬಹುದು. ಸಾರ್ವಜನಿಕರು ಈ ಡಿಜಿಟಲ್ ಸೌಲಭ್ಯವನ್ನು ಸದುಪಯೋಗಪಡಿಸಿಕೊಳ್ಳಬಹುದು.

ಡಾಕ್ ಸೇವಾ ಆಪ್: ಅಂಚೆ ಸೇವೆಗಳನ್ನು ಇನ್ನಷ್ಟು ಸುಲಭವಾಗಿ ಪಡೆಯುವ ಉದ್ದೇಶದಿಂದ ಭಾರತೀಯ ಅಂಚೆ ಇಲಾಖೆ ಡಾಕ್ ಸೇವಾ ಆಪ್ ಅನ್ನು ಬಿಡುಗಡೆ ಮಾಡಿದೆ. ಈ ಮೊಬೈಲ್ ಆಪ್ ಮೂಲಕ ಅಂಚೆ ವಸ್ತುಗಳ ಬುಕ್ಕಿಂಗ್, ಟ್ರ?ಯಾಕಿಂಗ್, ದೂರು ನೋಂದಣಿ, ಸೇವಾ ಮಾಹಿತಿ ಸೇರಿದಂತೆ ವಿವಿಧ ಗ್ರಾಹಕ ಸೇವೆಗಳು ಮೊಬೈಲ್‌ನಲ್ಲೇ ಲಭ್ಯವಿರುತ್ತವೆ. ಸಾರ್ವಜನಿಕರು ಈ ಆಪ್ ಅನ್ನು ಡೌನ್‌ಲೋಡ್ ಮಾಡಿಕೊಂಡು ಬಳಸಬಹುದು. ಡೌನ್‌ಲೋಡ್ ಮಾಡಲು ಅಗತ್ಯವಾದ ಕ್ಯೂಆರ್ ಕೋಡ್ ಭಾರತೀಯ ಅಂಚೆ ಇಲಾಖೆಯ ವೆಬ್‌ಸೈಟ್‌ನಲ್ಲಿ ಲಭ್ಯವಿರುತ್ತದೆ. ಹೆಚ್ಚಿನ ಮಾಹಿತಿಗಾಗಿ ತಮ್ಮ ಸಮೀಪದ ಇಲಾಖಾ ಅಂಚೆ ಕಚೇರಿಯನ್ನು ಸಂಪರ್ಕಿಸಬಹುದು ಎಂದು ರಾಯಚೂರು ಅಂಚೆ ವಿಭಾಗದ ಅಂಚೆ ಅಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಎಸ್‌ಎಸ್‌ಎಲ್‌ಸಿ ಪರೀಕ್ಷಾ ಫಲಿತಾಂಶ ಸುಧಾರಣೆಗೆ ಕ್ರಮವಹಿಸಲು ಜಿಲ್ಲಾಧಿಕಾರಿ ನಿತೀಶ್ ಕೆ. ಸೂಚನೆ

ನೈಜ್ಯ ದೆಸೆ ನ್ಯೂಸ್

**ರಾಯಚೂರು: ಜಿಲ್ಲೆಯಲ್ಲಿ ಎಸ್‌ಎಸ್‌ಎಲ್‌ಸಿ ಪರೀಕ್ಷಾ ಫಲಿತಾಂಶ ಸುಧಾರಿಸಿ, ರಾಜ್ಯದಲ್ಲಿ ರಾಯಚೂರು ಜಿಲ್ಲೆಯು ಉತ್ತಮ ಸ್ಥಾನ ಕಾಯ್ದುಕೊಳ್ಳುವ ಹಾಗೆ ಎಲ್ಲಾ ಸಿದ್ಧತೆಗಳನ್ನು ಮಾಡಿಕೊಳ್ಳಬೇಕು. ಸಂಬಂಧಿಸಿದ ಅಧಿಕಾರಿಗಳು ತಮ್ಮ ಜವಾಬ್ದಾರಿ ಅರಿತು ಕಾರ್ಯನಿರ್ವಹಿಸಬೇಕು ಎಂದು ಜಿಲ್ಲಾಧಿಕಾರಿ ನಿತೀಶ್ ಕೆ. ಅವರು ಹೇಳಿದರು.**

ಫೆ.12ರ ಗುರುವಾರ ದಂದು ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಪ್ರಸಕ್ತ ಶೈಕ್ಷಣಿಕ ಸಾಲಿನಲ್ಲಿ ಎಸ್‌ಎಸ್‌ಎಲ್‌ಸಿ ಪರೀಕ್ಷಾ ಫಲಿತಾಂಶ ಸುಧಾರಣೆಗಾಗಿ ಹಮ್ಮಿಕೊಂಡಿದ್ದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಫಲಿತಾಂಶದ ಪ್ರಮಾಣ ಹೆಚ್ಚಿಸುವಲ್ಲಿ ಶಿಕ್ಷಕರ



ಶ್ರಮ ಬಹಳ ಪ್ರಮುಖವಾಗಿರುತ್ತದೆ. ಕಲಿಕೆಯಲ್ಲಿ ಹಿಂದುಳಿದ ಮಕ್ಕಳನ್ನು ಗುರುತಿಸಿ ವಿಶೇಷ ಗಮನಹರಿಸಿದಾಗ ಸಹಜವಾಗಿ ಉತ್ತಮ ಫಲಿತಾಂಶ ದೊರೆಯುತ್ತದೆ. ಮಕ್ಕಳ ಶೈಕ್ಷಣಿಕ, ಕೌಟುಂಬಿಕ ವಾತಾವರಣ ಸರಿಯಾಗಿಲ್ಲ ಎನ್ನುವಂತಹ ಬಾಲಿಶ ಕಾರಣಗಳನ್ನು ಹೇಳದೇ ಮಕ್ಕಳ ಕಲಿಕೆಗೆ ಪೂರಕ ವಾತಾವರಣ ನಿರ್ಮಿಸುವ ಹೊಣೆಗಾರಿಕೆ



ಶಿಕ್ಷಕರ ಮೇಲಿದೆ ಎಂದು ಅವರು ತಿಳಿಸಿದರು. ಪೂರ್ವಸಿದ್ಧತಾ ಪರೀಕ್ಷೆಗಳ ಫಲಿತಾಂಶದ ಆಧಾರದ ಮೇಲೆ, ಕಡಿಮೆಅಂಕ ಗಳಿಸಿದ ವಿದ್ಯಾರ್ಥಿಗಳ ಕಡೆಗೆ ಶಿಕ್ಷಕರು ವಿಶೇಷ ಗಮನ ಹರಿಸಬೇಕು. ಶೇ.40ಕ್ಕಿಂತ ಕಡಿಮೆ ಫಲಿತಾಂಶ ಬಂದಿರುವ ಶಾಲೆಗಳ ಮೇಲೆ ಹೆಚ್ಚಿನ ನಿಗಾ ವಹಿಸಿ, ಅಲ್ಲಿನ ಬೋಧನಾ ಕ್ರಮಗಳಲ್ಲಿ ಸುಧಾರಣೆ ತರಬೇಕೆಂದು ಸಂಬಂಧಿಸಿದ ಅಧಿಕಾರಿಗಳಿಗೆ ಜಿಲ್ಲಾಧಿಕಾರಿಗಳು ಸೂಚಿಸಿದರು.

ಈ ವೇಳೆ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಈಶ್ವರ ಕುಮಾರ್ ಕಾಂದೂ ಅವರು ಮಾತನಾಡಿ, ವಾರ್ಷಿಕ ಪರೀಕ್ಷೆಗೆ ವಿದ್ಯಾರ್ಥಿಗಳನ್ನು ಸನ್ನದ್ಧಗೊಳಿಸಲು ಪೂರಕ ಬೋಧನೆ ಮತ್ತು ಪುನರಾವರ್ತನೆಗೆ ಆದ್ಯತೆ ನೀಡಬೇಕು. ಅಲ್ಲದೆ ಹಿಂದುಳಿದ ವಿದ್ಯಾರ್ಥಿಗಳನ್ನು ಶಿಕ್ಷಕರು ದತ್ತು ಪಡೆದು ವೈಯಕ್ತಿಕ ಮಾರ್ಗದರ್ಶನ ನೀಡುವ ಜೊತೆಗೆ ಪರೀಕ್ಷಾ ದೃಷ್ಟಿಯಿಂದ ಪ್ರಮುಖವಾಗಿರುವ ವಿಷಯಗಳ ಬಗ್ಗೆ ಹೆಚ್ಚಿನ ತರಬೇತಿ ನೀಡಬೇಕೆಂದರು. ಇದೇ ಸಂದರ್ಭದಲ್ಲಿ ಶಾಲಾ ಶಿಕ್ಷಣ ಇಲಾಖೆಯ ಉಪ ನಿರ್ದೇಶಕರಾದ ಕೆ.ಡಿ.ಬಡಿಗೇರ ಸೇರಿದಂತೆ ಜಿಲ್ಲೆಯ ವಿವಿಧ ತಾಲೂಕಿನ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಿಆರ್.ಪಿ, ಬಿಆರ್ ಪಿ ಸೇರಿದಂತೆ ವಿವಿಧ ಶಾಲೆಯ ಮುಖ್ಯಗುರುಗಳು ಇದ್ದರು.

## ನೇಮಕಾತಿ ಪ್ರಕಟಣೆ

ಹೆಸ್ಕಾಂ ನೇಮಕಾತಿ 2026 –388 ಟ್ರೈನಿ (ಐಟಿಐ ಎಲೆಕ್ಟ್ರಿಷಿಯನ್) ಹುದ್ದೆಗಳಿಗೆ ಆನ್‌ಲೈನ್/ಆಫ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಿ ಹೆಸ್ಕಾಂ ನೇಮಕಾತಿ 2026: 388 ಟ್ರೈನಿ (ಐಟಿಐ ಎಲೆಕ್ಟ್ರಿಷಿಯನ್) ಹುದ್ದೆಗಳಿಗೆ ಅರ್ಜಿ ಸಲ್ಲಿಸಿ. ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿ ಲಿಮಿಟೆಡ್ ಫೆಬ್ರವರಿ 2026 ರ HESCOM ಅಧಿಕೃತ ಅಧಿಸೂಚನೆಯ ಮೂಲಕ ಟ್ರೈನಿ (ಐಟಿಐ ಎಲೆಕ್ಟ್ರಿಷಿಯನ್) ಹುದ್ದೆಗಳನ್ನು ಭರ್ತಿ ಮಾಡಲು ಅರ್ಹ ಮತ್ತು ಆಸಕ್ತ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಿದೆ. ಹುಬ್ಬಳ್ಳಿ – ಕರ್ನಾಟಕ ಸರ್ಕಾರದಲ್ಲಿ ವೃತ್ತಿಯನ್ನು ಹುಡುಕುತ್ತಿರುವ ಉದ್ಯೋಗಾಕಾಂಕ್ಷಿಗಳು ಈ ಅವಕಾಶವನ್ನು ಬಳಸಿಕೊಳ್ಳಬಹುದು. ಆಸಕ್ತ ಅಭ್ಯರ್ಥಿಗಳು ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬಹುದು: 02–03–2026 ಮತ್ತು 09–ಮಾರ್ಚ್–2026 ರಂದು ಅಥವಾ ಮೊದಲು ಆಫ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬಹುದು. ಆನ್‌ಲೈನ್/ಆಫ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಪ್ರಾರಂಭ ದಿನಾಂಕ: 11–02–2026 ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: 02–ಮಾರ್ಚ್–2026 ಆಫ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: 09–ಮಾರ್ಚ್–2026 ಅಧಿಕೃತ ವೆಬ್‌ಸೈಟ್: hescom.karnataka.gov.in

## ಸಕಲ ಸಂಪತ್ತುಗಳಲ್ಲಿ ವಿದ್ಯೆ ಶ್ರೇಷ್ಠ ಸಂಪತ್ತು: ಶಾಸಕ ರಾಜುಗೌಡ

ನೈಜ್ಯ ದೆಸೆ ನ್ಯೂಸ್

**ತಾಳಿಕೋಟಿ: ಪಾಲಕರು ತಮ್ಮ ಮಕ್ಕಳಿಗೆ ವಿದ್ಯಾ ಸಂಪತ್ತು ಕೊಡಲು ಹೆಚ್ಚು ಆಸಕ್ತಿ ವಹಿಸಬೇಕು. ಏಕೆಂದರೆ ವಿದ್ಯೆ ಎಂಬುದು ಸಕಲ ಸಂಪತ್ತುಗಳಲ್ಲಿ ಶ್ರೇಷ್ಠವಾದ ಸಂಪತ್ತಾಗಿದೆ ಎಂದು ದೇವರು ಹಿಪ್ಪರಗಿ ಶಾಸಕ ರಾಜುಗೌಡ ಪಾಟೀಲ (ಕು.ಸಾಲವಾಡಗಿ) ಹೇಳಿದರು.**

ಪಟ್ಟಣದ ಶ್ರೀ ರಾಘವೇಂದ್ರ ಗ್ರಾಮೀಣಾಭಿವೃದ್ಧಿ ಶಿಕ್ಷಣ ಸಂಸ್ಥೆ(ರಿ) ಇದರ ಅಡಿಯಲ್ಲಿ ನಡೆಯುತ್ತಿರುವ ವಿ.ಕೆ.ಎಚ್.ಆಂಗ್ಲ ಮಾಧ್ಯಮ ಪ್ರಾಥಮಿಕ ಶಾಲೆಯ 2025–26 ನೇ ಸಾಲಿನ ವಾರ್ಷಿಕೋತ್ಸವ ಸಮಾರಂಭವನ್ನು ಉದ್ಘಾಟಿಸಿ ಅವರು ಗುರುವಾರ ಮಾತನಾಡಿದರು. ಇವತ್ತು ಬಹುತೇಕ ತಂದೆ–ತಾಯಂದಿರು ಮಕ್ಕಳಿಗಾಗಿ ಸಂಪತ್ತನ್ನು ಗಳಿಸಿ ಬಿಟ್ಟು ಹೋಗಲು ಬಯಸುತ್ತಾರೆ ಆದರೆ ಮಕ್ಕಳನ್ನೇ ಸಂಪತ್ತನ್ನಾಗಿ ಮಾಡಿ ಹೋಗಲು ನಾವೆಲ್ಲರೂ ಪ್ರಯತ್ನಿಸಬೇಕಾಗಿದೆ ಎಂದರು.



ನಿವೃತ್ತ ಪ್ರಾಚಾರ್ಯ ಪ್ರೊ. ಎಂ.ಡಿ.ಬಳಗಾನೂರ ಅವರು ಮಾತನಾಡಿ ಪಾಲಕರು ಮಕ್ಕಳಿಗೆ ಕೇವಲ ಒಳ್ಳೆಯ ಶಿಕ್ಷಣ ಕೊಟ್ಟರೆ ಸಾಲದು ಒಳ್ಳೆಯ ಸಂಸ್ಕಾರಗಳನ್ನೂ ಕಲಿಸಿಕೊಡಬೇಕು.

ನೈತಿಕ ಹಾಗೂ ಮಾನವೀಯ ಮೌಲ್ಯಗಳಿಲ್ಲದ ಶಿಕ್ಷಣಕ್ಕೆ ಯಾವ ಮಹತ್ವವೂ ಇಲ್ಲ. ಮಕ್ಕಳನ್ನು ಇಂಜಿನಿಯರ್ ಡಾಕ್ಟರ್ ಮಾಡುವುದರ ಜೊತೆಗೆ ಒಬ್ಬ ಒಳ್ಳೆಯ ಮನುಷ್ಯನನ್ನಾಗಿ ಮಾಡಿ ಎಂದರು. ಕ್ಷೇತ್ರ ಸಮನ್ವಯಾಧಿಕಾರಿ ಆರ್ ಬಿ ದಮ್ಮೂರಮಠ, ಪೀರ ಮೊಹಮ್ಮದ್ ಲಟಗೇರಿ,ಜೈನಬ ಗಝಾಲಿ ಮಾತನಾಡಿದರು. ಸಾನಿಧ್ಯ ವಹಿಸಿ ಆಶೀರ್ವಚನ ನೀಡಿದ ಪರಮ ಪೂಜ್ಯ ಸಿದ್ದಲಿಂಗ ದೇವರು ಕೇವಲ ಮಕ್ಕಳ ಅಂಕಗಳಿಗೆ ಮಹತ್ವ ನೀಡದೆ ಅವರ ಸರ್ವಾಂಗೀಣ ಪ್ರಗತಿಗಾಗಿ ಚಿಂತಿಸಿ ಅವರಲ್ಲಿ ಉದಾತ್ತ ಮೌಲ್ಯಗಳನ್ನು ಬೆಳೆಸಲು ಸದಾ ಕಾಳಜಿ ವಹಿಸಿ ಎಂದರು. ವಿಕೆಎಚ್ ಸಂಸ್ಥೆಯ ಅಧ್ಯಕ್ಷ ಪ್ರಲ್ಹಾದಸಿಂಗ್ ವಿ.ಹಜೇರಿ ಅಧ್ಯಕ್ಷತೆ ವಹಿಸಿದ್ದರು.

ಇದೇ ಸಂದರ್ಭದಲ್ಲಿ ಉತ್ತಮ ಶಿಕ್ಷಕಿ ಪ್ರಶಸ್ತಿಗೆ ಪಾತ್ರರಾದ ಎಂ.ಪಿ.ಸಿಪಾಯಿ, ಉತ್ತಮ ಪಾಲಕ ಸಂತೋಷಸಿಂಗ್ ಹಾಗೂ ಆದರ್ಶ ವಿದ್ಯಾರ್ಥಿ ಶಕೀಲ ಇನಾಮದಾರ ಇವರನ್ನು ಸನ್ಮಾನಿಸಿ ಗೌರವಿಸಲಾಯಿತು. ಶಾಲೆಯ ಕಾರ್ಯದರ್ಶಿ ಮಾಧುರಿ ಪ. ಹಜೇರಿ, ಮುಸ್ಲಿಂ ಬ್ಯಾಂಕ್ ಉಪಾಧ್ಯಕ್ಷ ರಫೀಕ್ ಬೇಪಾರಿ, ನಿರ್ದೇಶಕರಾದ ಸಲಾವುದ್ದೀನ್ ಇರ್ಫಾನ್ ಖಾಜಿ, ಸಾಹಿಲ್ ಮುರಾಳ, ಉಸ್ಮಾನಗನಿ ಖಾಜಿ, ಸಮಾಜ ಸೇವಕ ಡಾ.ಮೀರಾಶಾ ಮಕಾನದಾರ, ಸಿ.ಆರ್ಸಿ ಗಳಾದ ರಾಜು ವಿಜಾಪುರ, ಅಲ್ತಾಫ್ ಮುದ್ದೇಬಿಹಾಳ,ಅಲ್ ಹುದಾ ಶಿಕ್ಷಣ ಸಂಸ್ಥೆ ಅಧ್ಯಕ್ಷ ಜಾವೀದ ಕೆಂಭಾವಿ,ಬಸನಗೌಡ ಹಳ್ಳಿ ಪಾಟೀಲ, ಮೌಲಾಸಾಬ ಶೇಕ, ಅಬ್ದುಲ್ ಜಬ್ಬಾರ ಹವಾಲ್ದಾರ, ಮುಖ್ಯ ಗುರುಮಾತೆ ರಾಜೇಶ್ವರಿ ಅಗ್ನಿ,ಆಡಳಿತ ಮಂಡಳಿ ನಿರ್ದೇಶಕರು, ಶಾಲಾ ಸಿಬ್ಬಂದಿ ವರ್ಗ, ಪಾಲಕರು ಹಾಗೂ ವಿದ್ಯಾರ್ಥಿಗಳು ಇದ್ದರು. ವೇದಿಕೆ ಕಾರ್ಯಕ್ರಮದ ನಂತರ ಮಕ್ಕಳ ಸಂಸ್ಕೃತಿಕ ಕಾರ್ಯಕ್ರಮಗಳು ಜರುಗಿದವು.

## ಫೆ.16ರಂದು ರಾಯಚೂರು ಜಿಲ್ಲೆಯಲ್ಲಿ ಸಲೀಂ ಅಹ್ಮದ್ ಪ್ರವಾಸ

ನೈಜ್ಯ ದೆಸೆ ನ್ಯೂಸ್

**ರಾಯಚೂರು: ಕರ್ನಾಟಕ ವಿಧಾನ ಪರಿಷತ್ತಿನ ಸರ್ಕಾರಿ ಮುಖ್ಯ ಸಚೇತಕರಾದ ಸಲೀಂ ಅಹ್ಮದ್ ಅವರು ಫೆ.16ರಂದು ರಾಯಚೂರು ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡಿದ್ದಾರೆ. ಫೆ.15ರಂದು ರಾತ್ರಿ 11.20ಕ್ಕೆ ರೈಲು ಮಾರ್ಗವಾಗಿ ಹೊರಟು ಫೆ.16ರ ಬೆಳಗ್ಗೆ 8.20ಕ್ಕೆ ರಾಯಚೂರು ನಗರಕ್ಕೆ ಆಗಮಿಸಿ ನಗರದ ಅತಿಥಿ ಗೃಹದಲ್ಲಿ ವಿಶ್ರಾಂತಿ ಪಡೆಯುವರು.**

ಬಳಿಕ ಬೆಳಿಗ್ಗೆ 11.30ಕ್ಕೆ ರಾಯಚೂರಿನ ಡಿಸಿಸಿ ಕಚೇರಿಯಲ್ಲಿ ಕಾರ್ಯಕರ್ತರ ಭೇಟಿ ಹಾಗೂ ಪತ್ರಿಕಾಗೋಷ್ಠಿ ನಡೆಸುವರು. ರಾತ್ರಿ 8 ಗಂಟೆಗೆ ನಗರದ ಮಹಿಳಾ ಸಮಾಜದ ಆವರಣದಲ್ಲಿ ನಡೆಯುವ ಉಮ್ರಾ ಯಾತ್ರಿಗಳ ಕಾರ್ಯಕ್ರಮದಲ್ಲಿ ಭಾಗವಹಿಸುವರು. ರಾತ್ರಿ 11.10ಕ್ಕೆ ರಾಯಚೂರಿನಿಂದ ರೈಲು ಮಾರ್ಗವಾಗಿ ಹೊರಟು ಕೇಂದ್ರ ಸ್ಥಾನ ಬೆಂಗಳೂರಿಗೆ ಪ್ರಯಾಣ ಬೆಳೆಸಲಿದ್ದಾರೆ ಎಂದು ವಿಧಾನ ಪರಿಷತ್ತಿನ ಸರ್ಕಾರಿ ಮುಖ್ಯ ಸಚೇತಕರ ಆಪ್ತ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕರ್ನಾಟಕ ರಾಜ್ಯ ಕೈಗಾರಿಕಾ, ಮೂಲಭೂತ ಸೌಕರ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷರಿಂದ ರಾಯಚೂರು ವಿಮಾನ ನಿಲ್ದಾಣ ಕಾಮಗಾರಿ ಪರಿಶೀಲನೆ



ನೈಜ್ಯ ದೆಸೆ ನ್ಯೂಸ್

**ರಾಯಚೂರು: ಕರ್ನಾಟಕ ರಾಜ್ಯ ಕೈಗಾರಿಕಾ ಮತ್ತು ಮೂಲಭೂತ ಸೌಕರ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಎಸ್.ಜಿ.ನಂಜಯ್ಯನಮಠ ಅವರು ಫೆ.13ರಂದು ರಾಯಚೂರು ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡು ಯರಮರಸ್ ಬಳಿಯ ವಿಮಾನ ನಿಲ್ದಾಣ ಕಾಮಗಾರಿ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.**

ಬಳಿಕ ಸುದ್ದಿಗಾರರೊಂದಿಗೆ ಅವರು ಮಾತನಾಡಿ, ಒಟ್ಟಾರೆ 322 ಎಕರೆ ವಿಸ್ತೀರ್ಣ ಪ್ರದೇಶದಲ್ಲಿ ರಾಯಚೂರು ವಿಮಾನ ನಿಲ್ದಾಣ ಕಾಮಗಾರಿ ನಡೆಯುತ್ತಿದೆ. ಕಾಮಗಾರಿಯು ಈಗಾಗಲೇ ಶೇ.31ರಷ್ಟು ಪೂರ್ಣವಾಗಿದೆ. ಬರುವ ಎರಡೂವರೆ ತಿಂಗಳಲ್ಲಿ ರನ್ ವೇ ಕಾಮಗಾರಿಯು ಪೂರ್ಣವಾಗಲಿದೆ. ಈ ವರ್ಷದಲ್ಲಿ ಮಳೆ ನಿರಂತರವಾಗಿ ಸುರಿದ ಕಾರಣ ರನ್ ವೇ ಕಾಮಗಾರಿಯು ಮಂದಗತಿಯಲ್ಲಿ ಸಾಗಿತ್ತು ಎಂದು ತಿಳಿಸಿದರು. ಒಟ್ಟಾರೆ ಮುಂದಿನ ಒಂದೂವರೆ ವರ್ಷದ ಕಾಲಾವಧಿಯಲ್ಲಿ ಕಾಮಗಾರಿ ಪೂರ್ಣಗೊಳಿಸುವ ಗುರಿ ಹೊಂದಿದ್ದೇವೆ. ಮುಂದಿನ 3 ತಿಂಗಳಲ್ಲಿ ಮತ್ತೆ ರಾಯಚೂರು ಪ್ರವಾಸ ಕೈಗೊಂಡು ಪುನಃ ಅಭಿವೃದ್ಧಿ ಕಾರ್ಯ ಪರಿಶೀಲಿಸುವೆ ಎಂದು ಅವರು ತಿಳಿಸಿದರು.

ಏಗನೂರು ಗ್ರಾಮದಲ್ಲಿ 30 ಮನೆಗಳು ಬೇರೆಡೆಗೆ ಸ್ಥಳಾಂತರ ಮಾಡಲು ಮೂರು ಎಕರೆ ಜಮೀನು ಹಾಗೂ ದಂಡ ಗ್ರಾಮದಲ್ಲಿನ 108 ಮನೆಗಳನ್ನು ಬೇರೆಡೆ ಸ್ಥಳಾಂತರ ಮಾಡಲು ಆರು ಎಕರೆ ಜಮೀನಿನಲ್ಲಿ ಲೇಔಟ್ ಕಾರ್ಯ ನಡೆಯುತ್ತಿದೆ ಎಂದು ಅವರು ತಿಳಿಸಿದರು. ವಿಮಾನ ನಿಲ್ದಾಣ ಕಾಮಗಾರಿಯ ಸಂಬಂಧ ಬೇರೇಡೆಗೆ ಸ್ಥಳಾಂತರ ವಾಗುವ ಎರಡು ಗ್ರಾಮಗಳಲ್ಲಿನ ಗ್ರಾಮಸ್ಥರಿಗೆ ಅವರ ಮನೆಯ ಕಿಮ್ಮತಿನ ಪರಿಹಾರವನ್ನು ನೀಡಲಾಗಿದೆ ಎಂದು ಅವರು ತಿಳಿಸಿದರು. ಪತ್ರಿಕಾಗೋಷ್ಠಿಯಲ್ಲಿ ಮುಖಂಡರಾದ ರಾಜು ಬಂಡಿಕೇರಿ, ರಾಜು ಹರಿಳಯ್ಯಮಠ, ಲೋಕೋಪಯೋಗಿ ಇಲಾಖೆ ಅಭಿಯಂತರಾದ ಮಹೇಶ್ ಸೇರಿದಂತೆ ಇತರರು ಇದ್ದರು.

## ಬೈಕ್ ಮತ್ತು ಬಸ್ ಡಿಕ್ಕಿ ಹೊಡೆದು ಅಪಘಾತ

ನೈಜ್ಯ ದೆಸೆ ನ್ಯೂಸ್

**ರಾಯಚೂರು: ಜಿಲ್ಲೆಯ ಮಸ್ಕಿ ತಾಲ್ಲೂಕಿನ ಮುಧೋಳ ಕ್ರಾಸ್ ಬಳಿ ಸಾರಿಗೆ ಬಸ್ ಹಾಗೂ ಬೈಕ್ ನಡುವೆ ಮುಖಾಮುಖಿ ಢಿಕ್ಕಿ ಸಂಭವಿಸಿ ಬೈಕ್ ಸವಾರ ಸ್ಥಳದಲ್ಲೇ ಮೃತಪಟ್ಟ ಘಟನೆ ಶುಕ್ರವಾರ ನಡೆದಿದೆ. ಮೃತರನ್ನು ಸಂಜೀವ್ ರಡ್ಡಿ (45) ಎಂದು ಗುರುತಿಸಲಾಗಿದೆ.**



ಕಲಬುರಗಿ ವಿಭಾಗಕ್ಕೆ ಸೇರಿದ ಸಾರಿಗೆ ಬಸ್ ಮಸ್ಕಿ ಕಡೆಗೆ ಸಾಗುತ್ತಿದ್ದ ವೇಳೆ, ಮಸ್ಕಿಯಿಂದ ಮುಧೋಳ ಕಡೆಗೆ ಬರುತ್ತಿದ್ದ ಬೈಕ್ ತಿರುವು ಪಡೆಯುವಾಗ ಮುಖಾಮುಖಿ ಢಿಕ್ಕಿ ಸಂಭವಿಸಿದೆ. ಬಸ್ ಚಾಲಕ ಅತಿವೇಗದಲ್ಲಿ ವಾಹನ ಚಲಾಯಿಸಿದ್ದೇ ಅಪಘಾತಕ್ಕೆ ಕಾರಣ ಎಂದು ಹೇಳಲಾಗುತ್ತಿದ್ದು, ಢಿಕ್ಕಿಯ ತೀವ್ರತೆಗೆ ಬೈಕ್ ಸಂಪೂರ್ಣ ನುಜ್ಜುಗುಜ್ಜಾಗಿದೆ. ಘಟನೆಯ ಮಾಹಿತಿ ಪಡೆದ ಮಸ್ಕಿ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಬಸ್ ಅನ್ನು ವಶಕ್ಕೆ ಪಡೆದು ತನಿಖೆ ಮುಂದುವರಿಸಿದ್ದಾರೆ. ಮೃತದೇಹವನ್ನು ಮರಣೋತ್ತರ ಪರೀಕ್ಷೆಗಾಗಿ ಮಸ್ಕಿ ಸಾರ್ವಜನಿಕ ಆಸ್ಪತ್ರೆಗೆ ರವಾನಿಸಲಾಗಿದೆ ಎಂದು ತಿಳಿದು ಬಂದಿದೆ.

ನೈಜ್ಯ ದೆಸೆ
ಕನ್ನಡ ದಿನಪತ್ರಿಕೆಯನ್ನು
ತಪ್ಪದೆ ಓದಿರಿ.

## ಫೆಬ್ರವರಿ ಮಾಹೆಗೆ ಪಡಿತರ ಧಾನ್ಯ ವಿತರಣೆ: ಜಿಲ್ಲಾಧಿಕಾರಿ ನಿತೀಶ್ ಕೆ.

ನೈಜ್ಯ ದೆಸೆ ನ್ಯೂಸ್

**ರಾಯಚೂರು: ಇಲ್ಲಿಯ ಜಿಲ್ಲಾ ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯಿಂದ 2026ರ ಫೆಬ್ರವರಿ ಮಾಹೆಗೆ ಪಡಿತರ ಧಾನ್ಯಗಳನ್ನು ವಿತರಣೆ ಮಾಡಲಾಗುತ್ತಿದೆ ಎಂದು ಜಿಲ್ಲಾಧಿಕಾರಿಗಳಾದ ನಿತೀಶ್ ಕೆ. ಅವರು ತಿಳಿಸಿದ್ದಾರೆ.**

ಜಿಲ್ಲೆಯ ಕೇಂದ್ರ ವ್ಯಾಪ್ತಿಯ ಪ್ರತಿ ಅಂತ್ಯೋದಯ (ಎಎವೈ) ಪಡಿತರ ಚೀಟಿಗೆ 35 ಕೆ.ಜಿ ಸಾರವರ್ಧಿತ ಅಕ್ಕಿ ಹಾಗೂ ಕೇಂದ್ರ ವ್ಯಾಪ್ತಿಯ ಪಿ.ಹೆಚ್.ಹೆಚ್(ಬಿಪಿಎಲ್) ಪಡಿತರ ಚೀಟಿಯಲ್ಲಿನ ಪ್ರತಿ ಫಲಾನುಭವಿಗೆ 05 ಕೆ.ಜಿ



ಸಾರವರ್ಧಿತ ಅಕ್ಕಿ ಇದರ ಜೊತೆಗೆ ರಾಜ್ಯ ಸರ್ಕಾರದ ಅನ್ನಭಾಗ್ಯ ಯೋಜನೆಯಡಿಯಲ್ಲಿ ರಾಜ್ಯ ಸರ್ಕಾರದ ಮಾರ್ಗಸೂಚಿಯಂತೆ ಏಕ ಸದಸ್ಯ, ದ್ವಿ ಸದಸ್ಯ ಮತ್ತು ತ್ರಿ ಸದಸ್ಯ ಎಎವೈ ಪಡಿತರ ಚೀಟಿಗಳನ್ನು ಹೊರತುಪಡಿಸಿ ನಾಲ್ಕು ಮತ್ತು ನಾಲ್ಕಕಿಂತ ಹೆಚ್ಚಿನ ಸದಸ್ಯರುಳ್ಳ ಕೇಂದ್ರ & ರಾಜ್ಯ ವ್ಯಾಪ್ತಿಯ ಅಂತ್ಯೋದಯ(ಎಎವೈ) ಮತ್ತು ಪಿ.ಹೆಚ್.ಹೆಚ್(ಬಿಪಿಎಲ್) ಪಡಿತರ ಚೀಟಿಯ ಪ್ರತಿ ಫಲಾನುಭವಿಗೆ ಹೆಚ್ಚುವರಿಯಾಗಿ 05 ಕೆ.ಜಿ ಅಕ್ಕಿಯನ್ನು ಉಚಿತವಾಗಿ ವಿತರಿಸಲಾಗುವುದು.

ಒಂದು ರಾಷ್ಟ್ರ ಒಂದು ಪಡಿತರ ಚೀಟಿ (ಅಂತರ್ ರಾಜ್ಯ/ ಅಂತರ್ ಜಿಲ್ಲೆ) ಪೋರ್ಟಬಿಲಿಟಿ ಜಾರಿಯಲ್ಲಿರುವುದರಿಂದ ಯಾವುದೇ ರಾಜ್ಯದ ಪಡಿತರ ಚೀಟಿದಾರರು ಯಾವುದೇ ವರ್ಗದ ಪಡಿತರ ಚೀಟಿದಾರರು ಯಾವುದೇ ನ್ಯಾಯಬೆಲೆ ಅಂಗಡಿಯಲ್ಲಿ ಪಡಿತರವನ್ನು ಪಡೆಯಲು ಅವಕಾಶ ಕಲ್ಪಿಸಲಾಗಿದೆ. ಯಾವುದೇ ನ್ಯಾಯಬೆಲೆ ಅಂಗಡಿಕಾರರು ಕಡಿಮೆ ಪ್ರಮಾಣದ ಪಡಿತರವನ್ನು ವಿತರಣೆ ಮಾಡಿದ್ದಲ್ಲಿ ಹಣ ಕೇಳಿದ್ದಲ್ಲಿ ಮತ್ತು ಇತರೆ ದೂರುಗಳಿಗೆ ನಿಶುಲ್ಕ ದೂರವಾಣಿ ಸಂಖ್ಯೆ 1967ಗೆ ಹಾಗೂ ತಾಲ್ಲೂಕಿನಲ್ಲಿರುವ ತಹಶೀಲ್ದಾರರ ಕಛೇರಿಗೆ ಅಥವಾ ಜಿಲ್ಲೆಯ ಉಪನಿರ್ದೇಶಕರ ಕಛೇರಿಗೆ ದೂರನ್ನು ಸಲ್ಲಿಸಬಹುದಾಗಿದೆ. ಈ ಯೋಜನೆಯಡಿ ವಿತರಿಸಲಾದ ಆಹಾರ ಧಾನ್ಯಗಳನ್ನು ಹಣಕ್ಕಾಗಿ ಪಡಿತರ ಚೀಟಿದಾರರು ಮಾರಾಟ ಮಾಡುವುದಾಗಲಿ ಅಥವಾ ಸಂಗ್ರಹಣೆ ಮಾಡುವುದು ಕಂಡುಬಂದಲ್ಲಿ ಅಂತಹ ಪಡಿತರ ಚೀಟಿದಾರರಿಗೆ ವಿತರಿಸಲಾದ ಆಹಾರ ಧಾನ್ಯಗಳಿಗೆ ಮುಕ್ತ ಮಾರುಕಟ್ಟೆ ದರಕ್ಕೆ ದಂಡ ವಿಧಿಸಲಾಗುವುದು ಮತ್ತು ಈ ಪಡಿತರ ಚೀಟಿಯನ್ನು ಆರು ತಿಂಗಳ ಅವಧಿಗೆ ಅಮಾನತ್ತುಗೊಳಿಸಲಾವುದೆಂದು ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕೃಷಿ ಉದ್ಯಮಿ ತರಬೇತಿಗೆ ಮಹಿಳಾ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನ




ನೈಜ್ಯ ದೆಸೆ ನ್ಯೂಸ್

**ರಾಯಚೂರು: ಇಲ್ಲಿನ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ, ಗ್ರಾಮೀಣ ಸ್ವಯಂ ಉದ್ಯೋಗ ತರಬೇತಿ ಸಂಸ್ಥೆ (ಆರ್‌ಸೇಟಿ) ಯಿಂದ ಗ್ರಾಮೀಣ ನಿರುದ್ಯೋಗಿ ಮಹಿಳೆಯರಿಗಾಗಿ ಕೃಷಿ ಉದ್ಯಮಿ (ಕುರಿ ಸಾಕಣೆ)ಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ತರಬೇತಿಯಲ್ಲಿ ಕೃಷಿ ಉದ್ಯಮಿ (ಕುರಿ ಸಾಕಣೆ)ಗೆ ಕುರಿತು 13 ದಿನಗಳ ಕಾಲ ತರಬೇತಿ ನೀಡಲಾಗುವುದು.**

ತರಬೇತಿಯ ಅವಧಿಯಲ್ಲಿ ಅಭ್ಯರ್ಥಿಗಳಿಗೆ ಉಚಿತ ಊಟ ಹಾಗೂ ಉಚಿತ ವಸತಿ ಸೌಕರ್ಯದ ವ್ಯವಸ್ಥೆ ಇರುತ್ತದೆ. ಆಸಕ್ತರು 10ನೇ ತರಗತಿ ವ್ಯಾಸಂಗ ಮಾಡಿರುವ 18 ರಿಂದ 45 ವರ್ಷದೊಳಗಿನ ಗ್ರಾಮೀಣ ಭಾಗದ ಬಿಪಿಎಲ್ ಅಭ್ಯರ್ಥಿಗಳು ಆಧಾರ್ ಕಾರ್ಡ್ ಜೆರಾಕ್ಸ್, ಗ್ರಾಮೀಣ ಪಡಿತರ ಚೀಟಿ (ಬಿಪಿಎಲ್, ಪಿಎಚ್‌ಎಚ್, ಎನ್‌ಪಿಎಚ್‌ಎಚ್ ಮತ್ತು ಎಎಯ್‌ವೈ) ಜೆರಾಕ್ಸ್, 4 ಫೋಟೋಗಳು, ಬ್ಯಾಂಕ್ ಪಾಸ್‌ಬುಕ್ ಜೆರಾಕ್ಸ್ ಹಾಗೂ ಪ್ಯಾನ್ ಕಾರ್ಡ್ ಜೆರಾಕ್ಸೊಂದಿಗೆ ನವೆಂಬರ್ 16ರೊಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ನಿರ್ದೇಶಕರು ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ ಗ್ರಾಮೀಣ ಸ್ವಯಂ ಉದ್ಯೋಗ ತರಬೇತಿ ಸಂಸ್ಥೆ (ಆರ್‌ಸೇಟಿ) ಆಶಾಪೂರು ರಸ್ತೆ, ರಾಯಚೂರು. ಅಥವಾ ಮೊಬೈಲ್ ಸಂಖ್ಯೆ: 8217382735, 9742470999ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಗ್ರಾಮೀಣ ಸ್ವಯಂ ಉದ್ಯೋಗ ತರಬೇತಿ ಸಂಸ್ಥೆಯ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ರಾಯಚೂರಿನ ಘನತ್ಯಾಜ್ಯ ಸಂಪನ್ಮೂಲ ಪುನರ್ಬಳಕೆ ನಿರ್ವಹಣಾ ಘಟಕದ ಸ್ಥಳಕ್ಕೆ ಪ್ರಾದೇಶಿಕ ಆಯುಕ್ತರು ಭೇಟಿ

ನೈಜ್ಯ ದೆಸೆ ನ್ಯೂಸ್

**ರಾಯಚೂರು: ರಾಯಚೂರು ಜಿಲ್ಲಾ ಪ್ರವಾಸದಲ್ಲಿದ್ದ ರಾಯಚೂರು ಮಹಾನಗರ ಪಾಲಿಕೆಯ ಆಡಳಿತಾಧಿಕಾರಿಗಳು ಆಗಿರುವ ಕಲಬುರಗಿ ವಿಭಾಗದ ಪ್ರಾದೇಶಿಕ ಆಯುಕ್ತರಾದ ಜಹೀರಾ ನಸೀಮ್ ಅವರು ಫೆ.11ರಂದು ಯಕ್ಲಾಸಾಪೂರ ಬಳಿಯಲ್ಲಿರುವ ರಾಯಚೂರಿನ ಘನತ್ಯಾಜ್ಯ ಸಂಪನ್ಮೂಲ ಪುನರ್ಬಳಕೆ ನಿರ್ವಹಣಾ ಘಟಕಕ್ಕೆ ಭೇಟಿ ನೀಡಿದರು.**

ಜೆಸಿಬಿ ಮತ್ತು ಇನ್ನಿತರ ಯಂತ್ರಗಳ ಮೂಲಕ ಬಿರುಸಿನಿಂದ ನಡೆದ ಘನತ್ಯಾಜ್ಯ ಸಂಪನ್ಮೂಲ ಪುನರ್ಬಳಕೆ ನಿರ್ವಹಣಾ ಕಾರ್ಯದ ವೀಕ್ಷಣೆ ನಡೆಸಿದ ಆಯುಕ್ತರು, ಪಾಲಿಕೆಯು ಘಟಕದ ಆವರಣದಲ್ಲಿ ಕೈಗೊಂಡ ಬೇರೆ ಬೇರೆ ಕಾರ್ಯಗಳ ಬಗ್ಗೆ ಮಾಹಿತಿ ಪಡೆದುಕೊಂಡರು. ಕೆಲ ತಿಂಗಳುಗಳ ಹಿಂದಷ್ಟೇ ಉಪ ಲೋಕಾಯುಕ್ತರಾದ ಬಿ ವೀರಪ್ಪ ಅವರು ಇಲ್ಲಿಗೆ ಭೇಟಿ ನೀಡಿ ಘಟಕದ ನಿರ್ವಹಣಾ ಕಾರ್ಯದ ಬಗ್ಗೆ



ಪರಿಶೀಲಿಸಿ, ಕಾರ್ಯಚುರುಕುಗೊಳಿಸಲು ಸೂಚನೆ ನೀಡಿದ್ದರು. ಅದರಂತೆ ಪಾಲಿಕೆಯು ಈ ಕಾರ್ಯಕ್ಕೆ ಹೆಚ್ಚಿನ ಆದ್ಯತೆ ನೀಡಿದೆ. ಸಾಕಷ್ಟು ಪ್ರಮಾಣದಲ್ಲಿ ಹಾಕಲಾಗಿದ್ದ ಘನತಾಜ್ಯ ಸಂಪನ್ಮೂಲ ಪುನರ್ಬಳಕೆ ನಿರ್ವಹಣಾ ಕಾರ್ಯ ನಡೆಸಿ ಅರ್ಧದಷ್ಟು ತಾಜ್ಯವನ್ನು ವಿಲೆ ಮಾಡಿ ಈಗ ಮೊದಲಿಗಿಂತ ನಿರ್ವಹಣಾ ಕಾರ್ಯ ಚುರುಕಾಗಿ ನಡೆದಿದೆ.

ಇನ್ನು ಕೆಲವೇ ತಿಂಗಳಲ್ಲಿ ಇಲ್ಲಿನ ಎಲ್ಲ ಘನತಾಜ್ಯವನ್ನು ಪುನರ್ಬಳಕೆ ಪ್ರಕ್ರಿಯೆಗೊಳಪಡಿಸಿ ಖಾಲಿ ಮಾಡುವುದಾಗಿ ಆಯುಕ್ತರಾದ ಜುಬಿನ್ ಮೊಹಪಾತ್ರ ಅವರು ಆಯುಕ್ತರಿಗೆ ತಿಳಿಸಿದರು. ಪಾಲಿಕೆಯ ವಾಹನಗಳ ವೀಕ್ಷಣೆ: ರಾಯಚೂರು





ಮಹಾನಗರ ಪಾಲಿಕೆಯಿಂದ ನಗರದ ಸ್ವಚ್ಛತೆಗಾಗಿ ಖರೀದಿಸಿರುವ ಸ್ವೀಪಿಂಗ್ ಯಂತ್ರ, ಒಳಚರಂಡಿ ಶುಚಿಗೊಳಿಸುವ ಮೌಂಟೇಡ್ ರೋಬೋಟಿಕ್ ಯಂತ್ರದ ಕಾರ್ಯವನ್ನು ಆಯುಕ್ತರು ವೀಕ್ಷಣೆ ನಡೆಸಿದರು. ನಗರದ ಕೃಷಿ ವಿಶ್ವವಿದ್ಯಾಲಯದ ಆವರಣದಲ್ಲಿ ಎರಡೂ ವಾಹನಗಳ ಕಾರ್ಯಗಳ ವೀಕ್ಷಣೆ ನಡೆಸಿದರು. ಮಾವಿನ ಕೆರೆ ಪ್ರದೇಶಕ್ಕೆ ಭೇಟಿ: ರಾಯಚೂರು ಪ್ರವಾಸದಲ್ಲಿದ್ದ ಪ್ರಾದೇಶಿಕ ಆಯುಕ್ತರು, ಮಾವಿನ ಕೆರೆ ಪ್ರದೇಶಕ್ಕೆ ಭೇಟಿ ನೀಡಿದರು.

ಮಾವಿನಕೆರೆ ಕೆರೆ ದಡದ ಮೇಲೆ ಕೈಗೊಂಡ ಕಾಮಗಾರಿ, ಉದ್ಯಾನ ನಿರ್ಮಾಣ, ಫುಟ್ ಪಾತ್ ನಿರ್ಮಾಣದ ಕಾಮಗಾರಿ ವೀಕ್ಷಿಸಿ ಮೆಚ್ಚುಗೆ ವ್ಯಕ್ತಪಡಿಸಿದರು. ಕೆರೆಗೆ ನೀರು ಕಡಿಮೆಯಾದಾಗಲು ಸಹ ಉದ್ಯಾನ ನಿರ್ವಹಣೆಯು ಸಮರ್ಪಕವಾಗಿ ನಡೆಯುವಂತೆ ನೋಡಿಕೊಳ್ಳಲು ಆಯುಕ್ತರು ಸಲಹೆ ಮಾಡಿದರು. ಈ ಸಂದರ್ಭದಲ್ಲಿ ಪಾಲಿಕೆಯ ಸಮಿತಿಯ ಕಾರ್ಯದರ್ಶಿ ಕೃಷ್ಣ ಶಾವಂತಗೇರಿ, ಉಪ ಆಯುಕ್ತರಾದ ಶರಣಪ್ಪ ಸತ್ಯಂಪೇಟೆ, ಸಂತೋಷ ರಾಣಿ ಸೇರಿದಂತೆ ಪಾಲಿಕೆಯ ಇನ್ನಿತರ ಅಧಿಕಾರಿಗಳು ಮತ್ತು ಸಿಬ್ಬಂದಿ ಉಪಸ್ಥಿತರಿದ್ದರು.

## ಶಿಕ್ಷಣ ಮಾರ್ಗದರ್ಶಿ ವಿಶೇಷ

## B.Tech LL.B

B.Tech LL.B (ಬ್ಯಾಚುಲರ್ ಆಫ್ ಟೆಕ್ನಾಲಜಿ ಮತ್ತು ಬ್ಯಾಚುಲರ್ ಆಫ್ ಲೆಜಿಸ್ಲೇಟಿವ್ ಲಾ) ಒಂದು ಅನನ್ಯ 5–6 ವರ್ಷಗಳ ಇಂಟಿಗ್ರೇಟೆಡ್ ಡ್ಯುಯಲ್ ಡಿಗ್ರಿ ಕೋರ್ಸ್ ಆಗಿದೆ. ಇದು ತಾಂತ್ರಿಕ ಜ್ಞಾನ (ಎಂಜಿನಿಯರಿಂಗ್) ಮತ್ತು ಕಾನೂನು ಜ್ಞಾನವನ್ನು ಸಂಯೋಜಿಸುತ್ತದೆ,ಬಿಟೆಕ್ ಎಲ್‌ಎಲ್‌ಬಿ ಕೋರ್ಸ್ ಅಥವಾ ಬ್ಯಾಚುಲರ್ ಆಫ್ ಟೆಕ್ನಾಲಜಿ ಮತ್ತು ಬ್ಯಾಚುಲರ್ ಆಫ್ ಲೆಜಿಸ್ಲೇಟಿವ್ ಲಾ ಕೋರ್ಸ್ 6 ವರ್ಷಗಳ ಕೋರ್ಸ್ ಆಗಿದ್ದು, ಇದು ಎಂಜಿನಿಯರಿಂಗ್ ಮತ್ತು ಕಾನೂನಿನ ಪ್ರಭಾವಶಾಲಿ ಮತ್ತು ಸಂಭಾವ್ಯ ಸಂಯೋಜನೆಗಳಲ್ಲಿ ಒಂದಾಗಿದೆ. ಈ ಎರಡು ಕ್ಷೇತ್ರಗಳ ಛೇದಕದಲ್ಲಿ ಕೆಲಸ ಮಾಡುವ ಮತ್ತು ಸೈಬರ್ ಸೆಕ್ಯು–ರಿಟಿ ಕಾನೂನು, ಬೌದ್ಧಿಕ ಆಸ್ತಿ ಕಾನೂನು ಮತ್ತು ತಂತ್ರಜ್ಞಾನ ಒಪ್ಪಂದಗಳಿಗೆ ಸಂಬಂಧಿಸಿದ ಸಮಸ್ಯೆಗಳನ್ನು ಪರಿಹರಿಸುವವರಿಗೆ ಈ ಪದವಿ ಪರಿಪೂರ್ಣ ಮಿಶ್ರಣವಾಗಿದೆ. ವಿಶೇಷವಾಗಿ ಬೌದ್ಧಿಕ ಆಸ್ತಿ ಹಕ್ಕುಗಳು (IPR), ಸೈಬರ್ ಕಾನೂನು ಮತ್ತು ತಂತ್ರಜ್ಞಾನ–ಸಂಬಂಧಿತ ಕಾನೂನು ವಿಷಯಗಳಿಗೆ ಹೆಚ್ಚಿನ ಬೇಡಿಕೆಯನ್ನು ಸೃಷ್ಟಿಸುತ್ತದೆ. Mahindra University Mahindra University +2 B.Tech LL.B ಕೋರ್ಸ್ ವಿವರಗಳು: ಅವಧಿ: 5–6 ವರ್ಷಗಳ ಇಂಟಿಗ್ರೇಟೆಡ್ ಕೋರ್ಸ್. ಅರ್ಹತೆ: ವಿಜ್ಞಾನ ವಿಭಾಗದಲ್ಲಿ (Physics, Chemistry, Maths) 12ನೇ ತರಗತಿ ಪೂರ್ಣಗೊಳಿಸಬೇಕು, ಸಾಮಾನ್ಯವಾಗಿ ಕನಿಷ್ಠ 50% – 60% ಅಂಕಗಳೊಂದಿಗೆ. ಪ್ರವೇಶ ಪರೀಕ್ಷೆಗಳು: CLAT, LSAT-India, ವಿಶ್ವವಿದ್ಯಾಲಯ–ನಿರ್ದಿಷ್ಟ ಪರೀಕ್ಷೆಗಳು. ಪಠ್ಯಕ್ರಮ: ಕಂಪ್ಯೂಟರ್ ಸೈನ್ಸ್/ಐಟಿ/ಸಿವಿಲ್/ಮೆಕ್ಯಾನಿಕಲ್ ಎಂಜಿನಿಯರಿಂಗ್ ವಿಷಯಗಳೊಂದಿಗೆ ಕಾನೂನು ವಿಷಯಗಳನ್ನು (ಸಿವಿಲ್, ಕ್ರಿಮಿನಲ್, ಕಾರ್ಪೊರೇಟ್, ಬೌದ್ಧಿಕ ಆಸ್ತಿ ಕಾನೂನು) ಕಲಿಯಬಹುದು. ಶುಲ್ಕ: ಅಂದಾಜು 14 ಲಕ್ಷಗಳಿಂದ 20 ಲಕ್ಷದವರೆಗೆ ಒಟ್ಟು ಕೋರ್ಸ್ ಶುಲ್ಕವಿರಬಹುದು. ವೃತ್ತಿ ಅವಕಾಶಗಳು: ಐಟಿ ಕಂಪನಿಗಳಲ್ಲಿ ಕಾನೂನು ಸಲಹೆಗಾರರು (Legal Advisor), ಸೈಬರ್ ಕಾನೂನು ತಜ್ಞರು, ಐಪಿಆರ್ ವಕೀಲರು (IPR Lawyer), ಮತ್ತು ಪೇಟೆಂಟ್ ವಕೀಲರಾಗಿ ಕೆಲಸ ಮಾಡಬಹುದು.

# ಜಿಲ್ಲಾಡಳಿತದಿಂದ ಫೆ.15ರಂದು ಸಂತ ಶ್ರೀಸೇವಾಲಾಲ್ ಜಯಂತಿ

ನೈಜ್ಯ ದೆಸೆ ನ್ಯೂಸ್

**ರಾಯಚೂರು: ಇಲ್ಲಿನ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ರಾಯಚೂರು ಮಹಾನಗರ ಪಾಲಿಕೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಗಳ ಸಂಯುಕ್ತಾಶ್ರಯದಲ್ಲಿ ಸಂತ ಶ್ರೀಸೇವಾಲಾಲ್ ಜಯಂತಿ ಕಾರ್ಯಕ್ರಮವು ನಗರದ ಪಂಡಿತ ಸಿದ್ಧರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ಫೆಬ್ರವರಿ 15ರ ಬೆಳಿಗ್ಗೆ 11ಕ್ಕೆ ಹಮ್ಮಿಕೊಳ್ಳಲಾಗಿದೆ.**

ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಶರಣಪ್ರಕಾಶ್ ರುದ್ರಪ್ಪ ಪಾಟೀಲ್ ಅವರು ಉದ್ಘಾಟಿಸುವರು. ಟನೆ ನೆರವೇರಿಸುವರು. ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಎನ್.ಎಸ್.ಬೋಸರಾಜು ಅವರು ಘನ ಉಪಸ್ಥಿತಿ ವಹಿಸುವರು. ರಾಯಚೂರು ನಗರ ಕ್ಷೇತ್ರದ ಶಾಸಕರಾದ ಡಾ.ಎಸ್.ಶಿವರಾಜ ಪಾಟೀಲ್ ಅವರು ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ



ಕರ್ನಾಟಕ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ರಾಯಚೂರು ಗ್ರಾಮಾಂತರ ಕ್ಷೇತ್ರದ ಶಾಸಕರಾದ ಬಸನಗೌಡ ದದ್ದಲ್, ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿ ಅಧ್ಯಕ್ಷರು ಆಗಿರುವ ಮಸ್ಕಿ ಕ್ಷೇತ್ರದ ಶಾಸಕರಾದ ಆರ್.ಬಸನಗೌಡ ತುರ್ವಿಹಾಳ, ಕರ್ನಾಟಕ ರಾಜ್ಯ ಕೈಗಾ–ರಿಕಾ ಮೂಲಸೌಲಭ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ಸಿಂಧನೂರು ಕ್ಷೇತ್ರದ ಶಾಸಕರಾದ ಹಂಪನಗೌಡ ಬಾದರ್ಲಿ, ಹಟ್ಟಿ ಚಿನ್ನದ ಗಣಿ ಕಂಪನಿ ನಿಯಮಿತದ ಅಧ್ಯಕ್ಷರು ಆಗಿರುವ ಬೀಳಗಿ ಕ್ಷೇತ್ರದ ಶಾಸಕರಾದ ಜೆ.ಟಿ.ಪಾಟೀಲ್, ರಾಯಚೂರು ಲೋಕಸಭಾ ಸದಸ್ಯರಾದ ಜಿ.ಕುಮಾರ ನಾಯಕ,

ಕೊಪ್ಪಳ ಲೋಕಸಭಾ ಸಂಸದರಾದ ಕೆ.ರಾಜಶೇಖರ ಹಿಟ್ನಾಳ, ವಿಧಾನ ಪರಿಷತ್ ಶಾಸಕರಾದ ಶಶೀಲ್ ಜಿ.ನಮೋಶಿ, ಮಾನವಿ ಕ್ಷೇತ್ರದ ಶಾಸಕರಾದ ಜಿ.ಹಂಪಯ್ಯ ನಾಯಕ, ಲಿಂಗಸಗೂರು ಕ್ಷೇತ್ರದ ಶಾಸಕರಾದ ಮಾನಪ್ಪ ಡಿ.ವಜ್ಜಲ್, ವಿಧಾನ ಪರಿಷತ್ ಶಾಸಕರಾದ ಚಂದ್ರಶೇಖರ್ ಬಿ.ಪಾಟೀಲ್, ದೇವದುರ್ಗ ಕ್ಷೇತ್ರದ ಶಾಸಕರಾದ ಕರೆಮ್ಮ ಜಿ.ನಾಯಕ, ವಿಧಾನ ಪರಿಷತ್ ಶಾಸಕರಾದ ಶರಣಗೌಡ ಪಾಟೀಲ ಬಯ್ಯಾಪುರ, ಎ.ವಸಂತಕುಮಾರ, ಬಸನಗೌಡ ಬಾದರ್ಲಿ, ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಅಧ್ಯಕ್ಷರಾದ ಮಲ್ಲಿಕಾರ್ಜುನ ಗೌಡ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ರಾಜಶೇಖರ ರಾಮಸ್ವಾಮಿ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಪಾಮಯ್ಯ ಮುರಾರಿ,

ರಾಯಚೂರು ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಪವನ್ ಕಿಶೋರ್ ಪಾಟೀಲ್, ಆರ್ಥಿಕ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳಾದ ರಿತೇಶಕುಮಾರ ಸಿಂಗ್, ಕಲಬುರಗಿ ವಿಭಾಗದ ಪ್ರಾದೇಶಿಕ ಆಯುಕ್ತರಾದ ಜಹೀರಾ ನಸೀಮ್, ಜಿಲ್ಲಾಧಿಕಾರಿಗಳಾದ ನಿತೀಶ್ ಕೆ., ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ ಕುಮಾರ್ ಕಾಂದೂ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾ–ರಿಗಳಾದ ಅರುಣಾಂಗ್ಶು ಗಿರಿ., ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ ಅವರು ಸೇರಿದಂತೆ ಇತರರು ಕಾರ್ಯಕ್ರಮದಲ್ಲಿ ಉಪಸ್ಥಿತರಿರುವರು. ಲಿಂಗಸುಗೂರಿನ ಉಪನ್ಯಾಸಕರಾದ ಶಂಕರ ಎಂ.ಪವಾರ್ ಅವರು ಸಂತ ಶ್ರೀಸೇವಾಲಾಲ್ ಅವರ ಕುರಿತು ಉಪನ್ಯಾಸ ನೀಡುವರು ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಉತ್ತರಾದೇವಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮಸ್ಕಿಯಲ್ಲಿ ಫೆ.16ರಂದು ಸಿದ್ಧರಾಮೇಶ್ವರರ ಜಯಂತಿ ಹಾಗೂ ದೇವಸ್ಥಾನದ ವಾರ್ಷಿಕೋತ್ಸವ




ನೈಜ್ಯ ದೆಸೆ ನ್ಯೂಸ್

ಮಸ್ಕಿ: ಶಿವಯೋಗಿ ಸಿದ್ಧರಾಮೇಶ್ವರರ ಜಯಂತಿ ಹಾಗೂ ಸಿದ್ಧರಾಮೇಶ್ವರ ದೇವಸ್ಥಾನದ 24ನೇ ವರ್ಷದ ವಾರ್ಷಿಕೋತ್ಸವವನ್ನು ಫೆ.16 ರಂದು ಹಮ್ಮಿಕೊಳ್ಳಲಾಗಿದೆ ಎಂದು ಭೋವಿ (ವಡ್ಡರ್) ಸಮಾಜದ ಮುಖಂಡ ಆನಂದ ಬನಗಲ್ ತಿಳಿಸಿದರು.

ಪಟ್ಟಣದ ಪತ್ರಿಕಾ ಭವನದಲ್ಲಿ ಶುಕ್ರವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು ಫೆ.16 ರಂದು ಬೆಳಿಗ್ಗೆ ಸಿದ್ಧರಾಮೇಶ್ವರ ದೇವರ ಮೂರ್ತಿಗೆ ರುದ್ರಾಭಿಷೇಕ, ವಿಶೇಷ ಪೂಜೆ ನಡೆಯಲಿದೆ. ನಂತರ ಕವಿತಾಳ ಕ್ರಾಸ ಹತ್ತಿರದ ಸಿದ್ಧರಾಮೇಶ್ವರ ವೃತ್ತದಿಂದ ವಾದ್ಯಮೇಳ ಹಾಗೂ ಮಹಿಳೆಯರ ಕಳಸ ಕನ್ನಡಿಯೊಂದಿಗೆ ಪಟ್ಟಣದ ಪ್ರಮುಖ ಬೀದಿಗಳಲ್ಲಿ ಸಿದ್ಧರಾಮೇಶ್ವರರ ಭಾವಚಿತ್ರದ ಮೆರವಣಿಗೆ ಅದ್ದೂರಿಯಾಗಿ ನಡೆಯಲಿದೆ ಎಂದರು. ಈ ಕಾರ್ಯಕ್ರಮಕ್ಕೆ ಭೋವಿ ಗುರುಪೀಠದ ಇಮ್ಮಡಿ ಸಿದ್ಧರಾಮೇಶ್ವರ ಸ್ವಾಮೀಜಿ, ಅಂಕಲಿಮಠದ ವೀರಭದ್ರ ಮಹಾಸ್ವಾಮೀಜಿ, ಗಚ್ಚಿನಮಠದ ವರರುದ್ರಮುನಿ ಶಿವಾಚಾರ್ಯ ಸ್ವಾಮೀಜಿ, ಇರಕಲ್‌ಮಠದ ಬಸವಪ್ರಸಾದ ಸ್ವಾಮೀಜಿ ಪಾಲ್ಗೊಳ್ಳಲಿದ್ದಾರೆ. ತಾಲ್ಲೂಕಿನ ವಿವಿಧ ಗ್ರಾಮಗಳಿಂದ ಎರಡು ಸಾವಿರ ಸಮಾಜದ ಬಂಧುಗಳ ಪಾಲ್ಗೊಳ್ಳಲಿದ್ದಾರೆಂದು ತಿಳಿಸಿದರು.

ಮುಖಂಡರಾದ ಸಾರಪ್ಪ ಬಂಗಾಲಿ, ರಮೇಶ ಗುಡಿಸಲಿ, ಶಿವರಾಜ ಬುಕ್ಕಣ್ಣ, ದುರುಗಪ್ಪ ಗೋನ್ವಾರ, ಮಲ್ಲಯ್ಯ ಭಾವಣಿ, ಜಿ.ಎಸ್.ಆನಂದ, ವೀರೇಶ ಬಡಿಗಿ, ಆಂಜನೇಯ ಆನೆಹೊಸೂರು, ಅಮರೇಶ ಸಾನಬಾಳ, ನಾಗರಾಜ ಸೇರಿದಂತೆ ಇತರ–ರಿದ್ದರು. ಮಸ್ಕಿ ಪಟ್ಟಣದ ಪತ್ರಿಕಾ ಭವನದಲ್ಲಿ ಶಿವಯೋಗಿ ಸಿದ್ಧರಾಮೇಶ್ವರರ ಜಯಂತಿ ಹಾಗೂ 24ನೇ ವರ್ಷದ ವಾರ್ಷಿಕೋತ್ಸವದ ಪೋಸ್ಟರ್ ಬಿಡುಗಡೆಗೊಳಿಸಿದರು.

## ಫೆ.17ರಿಂದ ರಾಯಚೂರು ಜಿಲ್ಲೆಯಲ್ಲಿ ಸಫಾಯಿ ಕರ್ಮಚಾರಿಗಳ ಆಯೋಗದ ಅಧ್ಯಕ್ಷರ ಪ್ರವಾಸ

ನೈಜ್ಯ ದೆಸೆ ನ್ಯೂಸ್

**ರಾಯಚೂರು: ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾ–ರಿಗಳ ಆಯೋಗದ ಅಧ್ಯಕ್ಷರಾದ ಪಿ.ರಘು ಅವರು ಫೆ.17 ರಿಂದ 19ವರೆಗೆ ರಾಯಚೂರು ಜಿಲ್ಲೆಯಲ್ಲಿ ಪ್ರವಾಸ ಹಮ್ಮಿಕೊಂಡಿದ್ದಾರೆ. ಫೆ.17ರ ಸಂಜೆ 4 ಗಂಟೆಗೆ ಯಾದಗಿರಿಯಿಂದ ಹೊರಟು ಸಂಜೆ 6ಕ್ಕೆ ರಾಯಚೂರು ನಗರಕ್ಕೆ ಆಗಮಿಸಿ ವಾಸ್ತವ್ಯ ಮಾಡುವರು. ಫೆ.18ರ ಬೆಳಿಗ್ಗೆ 10 ಗಂಟೆಗೆ ನಗರದ ರಿಮ್ಸ್ ಆಸ್ಪತ್ರೆಗೆ ಭೇಟಿ ನೀಡುವರು.**

ಮತ್ತು ಮ್ಯಾನ್‌ಹೋಲ್ ಸ್ವಚ್ಛತೆ ಘಟನೆ ಬಗ್ಗೆ ಪರಿಶೀಲನೆ ನಡೆಸುವರು. ಬಳಿ ಬೆಳಿಗ್ಗೆ 11 ಗಂಟೆಗೆ ರಾಯಚೂರು ಜಿಲ್ಲೆಯ ನಗರ ಮತ್ತು ಗ್ರಾಮೀಣ ಸ್ಥಳೀಯ ಸಂಸ್ಥೆಗಳು ಹಾಗೂ ಇತರೆ ಇಲಾಖೆಗಳಲ್ಲಿ ಕೆಲಸ ನಿರ್ವಹಿಸುತ್ತಿರುವ ಪೌರ ಕಾರ್ಮಿಕರು ಮತ್ತು ಸ್ವಚ್ಛತಾ ಕಾರ್ಮಿಕರೊಂದಿಗೆ ನೇರ ಸಂವಾದ ನಡೆಸುವರು. ಮಧ್ಯಾಹ್ನ 12.30ಕ್ಕೆ ರಾಯಚೂರು ಜಿಲ್ಲೆಯ ನಗರ ಸ್ಥಳೀಯ ಸಂಸ್ಥೆ, ಗ್ರಾಮ ಪಂಚಾಯತಿಗಳು ಮತ್ತು ಇತರೆ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸ್ವಚ್ಛತಾ ಕಾರ್ಮಿಕರು, ಪೌರಕಾರ್ಮಿಕರಿಗೆ ಸಂಬಂಧಿಸಿದಂತೆ ಅಧಿಕಾ–ರಿಗಳೊಡನೆ ಪ್ರಗತಿ ಪರಿಶೀಲನಾ ಸಭೆ ನಡೆಸುವರು. ಬಳಿ ರಾಯಚೂ–ರಿನಲ್ಲಿ ವಾಸ್ತವ್ಯ ಹೂಡುವರು. ಫೆ.19ರ 10 ಗಂಟೆಗೆ ರಾಯಚೂ–ರಿನಿಂದ ನಿರ್ಗಮಿಸಿ ಕೇಂದ್ರ ಸ್ಥಾನ ಬೆಂಗಳೂರಿಗೆ ಪ್ರಯಾಣ ಬೆಳೆಸುವರು ಎಂದು ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾ–

# ಸರಕಾರಿ ದಂತ ಕಾಲೇಜು ಆಧುನೀಕರಣಕ್ಕೆ ಶಿಲಾನ್ಯಾಸ

ನೈಜ್ಯ ದೆಸೆ ನ್ಯೂಸ್

**ಕರ್ನಾಟಕದಲ್ಲಿ ಸುವರ್ಣ ಮಹೋತ್ಸವ ಆಚ–ರಿಸುತ್ತಿರುವ ಸರ್ಕಾರಿ ದಂತ ಕಾಲೇಜು ಮತ್ತು ಸಂಶೋಧನಾ ಸಂಸ್ಥೆ (ಜಿಡಿಸಿಆರ್‌ಐ)ಯ ಆಧು–ನೀಕರಣಕ್ಕಾಗಿ ವೈದ್ಯಕೀಯ ಶಿಕ್ಷಣ, ಕೌಶಲ್ಯಾಭಿವೃದ್ಧಿ, ಜೀವನೋಪಾಯ ಮತ್ತು ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವ ಡಾ.ಶರಣಪ್ರಕಾಶ್ ಪಾಟೀಲ್ ಶಿಲಾನ್ಯಾಸ ನೆರವೇರಿಸಿದರು.**

**ರಾಜ್ಯ ಸರ್ಕಾರ 40 ಕೋಟಿ ರೂ. ವೆಚ್ಚದಲ್ಲಿ ಈ ಯೋಜನೆಯನ್ನು ಕೈಗೆತ್ತಿಕೊಳ್ಳುತ್ತಿದೆ.**

ಡಾ.ಶರಣಪ್ರಕಾಶ್ ಅವರು ಮಾತನಾಡಿ, "ಈ ಆಧುನೀಕರಣವು ಪ್ರತಿಷ್ಠಿತ ದಂತ ಕಾಲೇಜಿನ ಪರಂಪರೆಯನ್ನು ಮುಂದುವ–



ರಿಸುತ್ತಿದ್ದು, ವಿಶ್ವಮಟ್ಟದ ಸೌಲಭ್ಯಗಳನ್ನು ಒದಗಿಸುವುದು, ಕರ್ನಾಟಕದ ಎಲ್ಲಾ ನಾಗರಿಕ–ರಿಗೆ ಉನ್ನತ ಮಟ್ಟದ ದಂತ ಆರೋಗ್ಯವನ್ನು ಒದಗಿಸುವುದು ನಮ್ಮ ಸರ್ಕಾರದ ಮುಖ್ಯ ಗುರಿಯಾಗಿದೆ ಎಂದು ಹೇಳಿದರು.

ಉನ್ನತ ಶಿಕ್ಷಣ ಸಚಿವ ಡಾ.ಎಂ.ಸಿ.ಸುಧಾಕರ್ ಮಾತನಾಡಿ, ಇಂತಹ ಯೋಜನೆಗಳಿಗೆ ಹೂಡಿಕೆ ಮಾಡುವ ಮೂಲಕ, ವೈದ್ಯಕೀಯ ಶ್ರೇಷ್ಠತೆ ಮತ್ತು ಕೌಶಲ್ಯಾಭಿವೃದ್ಧಿ ಕೇಂದ್ರವಾಗಿ ಬೆಂಗಳೂರಿನ ಸ್ಥಾನವನ್ನು ಮತ್ತಷ್ಟು ಎತ್ತರಕ್ಕೆ ತೆಗೆದುಕೊಂಡು ಹೋಗುತ್ತೇವೆ ಎಂದು ಹೇಳಿದರು.

ಈ ಯೋಜನೆಯ ಅಡಿಯಲ್ಲಿ, ಸಾಂಪ್ರದಾಯಿಕ ಕಲ್ಲಿನ ವಾಸ್ತುಶಿಲ್ಪವನ್ನು ಸಂರಕ್ಷಿಸುವುದರ ಜೊತೆಗೆ ಐಷಾರಾಮಿ ಆಧು–ನಿಕ ಒಳಾಂಗಣ, ಕ್ಲಿನಿಕಲ್ ಕೊಠಡಿಗಳು ಮತ್ತು ಅತ್ಯಾಧುನಿಕ ಉಪಕರಣಗಳನ್ನು ಒದಗಿಸಲಾಗುವುದು. ಮೂರು ಅಂತಸ್ತಿನ ಕ್ಲಿನಿಕಲ್ ಸಂಕೀರ್ಣವನ್ನು ಮರು ಅಭಿವೃದ್ಧಿಪಡಿಸಿ, ವಿಶೇಷ ಚಿಕಿತ್ಸಾಲಯಗಳು ಮತ್ತು ಆರೋಗ್ಯ ಕ್ಲಬ್, ಚಾವಣಿಯ ಬ್ಯಾಡ್ಮಿಂಟನ್ ಕೋರ್ಟ್ ಸೇರಿದಂತೆ ಹೆಚ್ಚಿನ ಸೌಲಭ್ಯಗಳನ್ನು ನಿರ್ಮಿಸಲಾಗುತ್ತದೆ ಎಂದರು. ಈ ವೇಳೆ ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ಮುಹಮ್ಮದ್ ಮೊಹ್ಸಿನ್, ಜಿಡಿಸಿಆರ್‌ಐ ನಿರ್ದೇಶಕ ಡಾ. ಗಿರೀಶ್ ಬಿ. ಗಿರಡ್ಡಿ ಮತ್ತು ಇತರ ಅಧಿಕಾರಿಗಳು ಹಾಜರಿದ್ದರು.

## ದ್ವಿತೀಯ ಮೇಲ್ಮನವಿ ಆರ್‌ಟಿಐ ಅರ್ಜಿಗಳನ್ನು ಕಲ್ಬುರ್ಗಿ ಪೀಠಕ್ಕೆ ಸಲ್ಲಿಸಲು ಅವಕಾಶ

ನೈಜ್ಯ ದೆಸೆ ನ್ಯೂಸ್

**ರಾಯಚೂರು: ಕಲ್ಯಾಣ ಕರ್ನಾಟಕ ಭಾಗದ ಏಳು ಜಿಲ್ಲೆಗಳ ವ್ಯಾಪ್ತಿ ಹೊಂದಿದ ಕರ್ನಾಟಕ ಮಾಹಿತಿ ಆಯೋಗದ ಕಲ್ಬುರ್ಗಿ ಪೀಠದಲ್ಲಿ ಮಾಹಿತಿ ಹಕ್ಕು ಕಾಯ್ದೆ 2005, ಕಲಂ 19(3) ರನ್ವಯ ಸಲ್ಲಿಕೆಯಾಗುವ ದ್ವೀತಿಯ ಮೇಲ್ಮನವಿ ಅರ್ಜಿಗಳನ್ನು ಇನ್ಮುಂದೆ ಕಲ್ಬುರ್ಗಿ ಪೀಠದಲ್ಲಿ ಸ್ವೀಕರಿಸಲಾಗುವುದು ಎಂದು ಆಯೋಗವು ಪ್ರಕಟಣೆಯಲ್ಲಿ ತಿಳಿಸಿದೆ.**

ಈ ಮುಂಚೆ ಕಲಬುರಗಿ, ಬೀದರ್, ರಾಯಚೂರು, ಬಳ್ಳಾರಿ, ಕೊಪ್ಪಳ ವಿಜಯನಗರ ಯಾದಗಿರಿ ಜಿಲ್ಲೆಗಳು ವ್ಯಾಪ್ತಿಯಲ್ಲಿನ ದ್ವಿತೀಯ ಮೇಲ್ಮನವಿಗಳನ್ನು ಬೆಂಗಳೂ–ರಿನ ಕರ್ನಾಟಕ ಮಾಹಿತಿ ಆಯೋಗದಲ್ಲಿ ಸಲ್ಲಿಸಬೇಕಿತ್ತು. ಆದರೆ, ಸಾರ್ವಜನಿಕರಿಗೆ ಅನುಕೂಲವಾಗುವ ದೃಷ್ಟಿಯಿಂದ ಹಾಗೂ ಪ್ರಕರಣಗಳ ಶೀಘ್ರ ವಿಲೇವಾರಿಗೆ ಅನುಕೂಲವಾಗಲು ಕಲ್ಯಾಣ ಕರ್ನಾಟಕದ ಏಳು ಜಿಲ್ಲೆಗಳ ವ್ಯಾಪ್ತಿಯಲ್ಲಿ ಬರುವ ಅರ್ಜಿದಾರರು ತಮ್ಮ ಮಾಹಿತಿ ಹಕ್ಕು ಕಾಯ್ದೆ, 2005ರ ಕಲಂ 19(3) ದ್ವಿತೀಯ ಮೇಲ್ಮನವಿ ಅರ್ಜಿಗಳನ್ನು ಇನ್ಮುಂದೆ ಕರ್ನಾಟಕ ಮಾಹಿತಿ ಆಯೋಗ, ಕಲ್ಬುರ್ಗಿ ಪೀಠ, ಮಹಲ್–ಎ–ಶಾಹಿ ಅತಿಥಿ ಗೃಹ, ಹಳೆಯ ಪಿ.ಡಬ್ಲ್ಯೂ.ಡಿ.ಐ.ಬಿ ಆವರಣ, ರೈಲ್ವೆ ಸ್ಟೇಷನ್ ಎದುರುಗಡೆ ಕಲಬುರಗಿ ಇಲ್ಲಿ ಸಲ್ಲಿಸಬಹುದಾಗಿದೆ ಎಂದು ಪೀಠದ ಶಾಖಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಫೆ.17ರಂದು ಕೊಪ್ಪಳದಲ್ಲಿ ಗ್ಯಾರಂಟಿ ಉತ್ಸವ, ಕಾರ್ಯಾಗಾರ :ಸಂಗಮೇಶ ಗುತ್ತಿ

ನೈಜ್ಯ ದೆಸೆ ನ್ಯೂಸ್

**ಕೊಪ್ಪಳ: ಫೆಬ್ರವರಿ 17ರಂದು ಕೊಪ್ಪಳ ನಗರದಲ್ಲಿ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ರಾಜ್ಯಾಧ್ಯಕ್ಷ ಎಚ್.ಎಂ. ರೇವಣ್ಣ ಅವರ ಅಧ್ಯಕ್ಷತೆಯಲ್ಲಿ ಗ್ಯಾರಂಟಿ ಉತ್ಸವ ಹಾಗೂ ಕಾರ್ಯಾಗಾರವನ್ನು ಆಯೋಜಿಸಲಾಗಿದೆ ಎಂದು ಕುಕನೂರು ತಾಲೂಕು ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷ ಸಂಗಮೇಶ ಗುತ್ತಿ ತಿಳಿಸಿದ್ದಾರೆ.**

ಗುರುವಾರ ಪಟ್ಟಣದ ಪ್ರವಾಸಿ ಮಂದಿರದಲ್ಲಿ ತಾಲೂಕು ಪಂಚಾಯಿತಿ



ವತಿಯಿಂದ ಆಯೋಜಿಸಿದ್ದ ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆ ಹಾಗೂ ಗ್ಯಾರಂಟಿ ಉತ್ಸವದ ಪೂರ್ವಭಾವಿ ಸಭೆಯಲ್ಲಿ ಅವರು ಮಾತನಾಡಿದರು. ಪಂಚ ಗ್ಯಾರಂಟಿ ಯೋಜನೆಗಳ ಸದ್ಬಳಕೆ ಮಾಡಿಕೊಂಡು ಸಾಧನೆ ಮಾಡಿದ ಪ್ರತಿತಾಲೂಕಿನ ಪ್ರತಿಯೊಂದು ಗ್ಯಾರಂಟಿ ಯೋಜನೆಯ ಐದು ಫಲಾನುಭವಿಗಳನ್ನು ಉತ್ಸವದಲ್ಲಿ ಸನ್ಮಾನಿಸಿ ಗೌರವಿಸಲಾಗುವುದು ಎಂದು ತಿಳಿಸಿದರು. ಉತ್ಸವದ ಕುರಿತು ಸಾರ್ವಜನಿಕ–ರಿಗೆ ಮಾಹಿತಿ ತಲುಪಿಸಲು ಅಧಿಕಾರಿಗಳು ಹಾಗೂ ಸಿಬ್ಬಂದಿಯನ್ನು ನಿಯೋಜಿಸಲಾಗಿದೆ. ಯೋಜನೆಗಳ ಪರಿಣಾಮಕಾರಿ ಅನುಷ್ಠಾನಕ್ಕೆ ಎಲ್ಲಾ ಇಲಾಖೆಗಳ ಸಹಕಾರ ಅಗತ್ಯವೆಂದು ಸೂಚಿಸಿದರು. ಸಭೆಯಲ್ಲಿ ವಿವಿಧ ಇಲಾಖೆಗಳ ಅಧಿಕಾ–ರಿಗಳು ತಾಲೂಕಿನಲ್ಲಿ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಗತಿ ಕುರಿತು ವಿವರ ನೀಡಿ, ಸಮಿತಿ ಸದಸ್ಯರ ಪ್ರಶ್ನೆಗಳಿಗೆ ಉತ್ತರಿಸಿದರು. ಸಭೆಯಲ್ಲಿ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಜಿಲ್ಲಾ ಉಪಾಧ್ಯಕ್ಷ ಖಾಸಿಂಸಾಬ್ ತಳಕಲ್, ಜಿಲ್ಲಾ ಸಮಿತಿ ಸದಸ್ಯ ಮಲ್ಲಿಕಾರ್ಜುನ ಜಕ್ಕಲಿ, ಯಲಬುರ್ಗಾ ತಾಲೂಕಾಧ್ಯಕ್ಷ ಸುಧೀರ್ ಕೊರ್ಲಹಳ್ಳಿ, ಕುಕನೂರು ತಾಲೂಕು ಸಮಿತಿ ಸದಸ್ಯರು ಹಾಗೂ ಕುಕನೂರು ಮತ್ತು ಯಲಬುರ್ಗಾ ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗಳಾದ ಸಂತೋಷ್ ಬಿರಾದರ ಮತ್ತು ನೀಲಪ್ರಭ ಬಬಲಾದಿ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

# ಮಂತ್ರಾಲಯಕ್ಕೆ ಸರ್ಕಾರಿ ಬಸ್: ಭಕ್ತರಿಗೆ ಮಹತ್ವದ ಅಪ್‌ಡೇಟ್

ನೈಜ್ಯ ದೆಸೆ ನ್ಯೂಸ್

**ರಾಯಚೂರು: ಮಂತ್ರಾಲಯ ನಡುವೆ ರಾತ್ರಿ 9 ಗಂಟೆಯ ಬಳಿಕ ಸರ್ಕಾರಿ ಬಸ್ ಸೇವೆ ಇಲ್ಲ ಎಂದು ಸಾಮಾಜಿಕ ಜಾಲತಾಣದಲ್ಲಿ ಚರ್ಚೆಗಳು ನಡೆಯುತ್ತಿದ್ದವು. ಈ ಕುರಿತು ಚರ್ಚೆಗೆ ಮುಖ್ಯಮಂತ್ರಿಗಳ ವಿಶೇಷ ಕರ್ತವ್ಯಾಧಿಕಾರಿಗಳು ಸ್ಪಷ್ಟನೆ ನೀಡಿದ್ದಾರೆ.**

ಸಾಮಾಜಿಕ ಜಾಲತಾಣದಲ್ಲಿ ಈ ಕುರಿತು ಪೋಸ್ಟ್ ಹಾಕಲಾಗಿದ್ದು, ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ವ್ಯವಸ್ಥಾಪಕ ನಿರ್ದೇಶಕರ ಪರವಾಗಿ ಹೊರಡಿಸಿರುವ ಪ್ರಕಟಣೆಯನ್ನು ಲಗತ್ತಿಸಿದ್ದಾರೆ. ಈ ಪ್ರಕಟಣೆ ರಾತ್ರಿ 9 ಗಂಟೆಯ ನಂತರ ರಾಯಚೂರಿನಿಂದ ಮಂತ್ರಾಲಯಕ್ಕೆ ಬಸ್ ಸೇವೆ ಇಲ್ಲ ಎಂದು ಸಾಮಾಜಿಕ ಜಾಲತಾಣ ಎಕ್ಸ್–ಫಿ ಖಾತೆಯಲ್ಲಿ ಪ್ರಕಟವಾದ ಸುದ್ದಿಯ ಬಗ್ಗೆ ಎಂಬ ವಿಷಯ ಒಳಗೊಂಡಿದೆ. ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ರಾತ್ರಿ 9




ಗಂಟೆಯ ನಂತರ ರಾಯಚೂರಿನಿಂದ ಮಂತ್ರಾಲಯಕ್ಕೆ ಬಸ್ ಸೇವೆ ಇಲ್ಲ ಎಂದು ಸಾಮಾಜಿಕ ಜಾಲತಾಣ ಎಕ್ಸ್–ಫಿ ಖಾತೆಯಲ್ಲಿ ಪ್ರಕಟವಾದ ಸುದ್ದಿಯನ್ನು ಪರಿಶೀಲಿಸಲಾಯಿತು ಎಂದು ಹೇಳಿದ್ದಾರೆ.

ಪ್ರಸ್ತುತ ರಾಯಚೂರು–ಮಂತ್ರಾಲಯಕ್ಕೆ ರಾಯಚೂರು ಬಸ್ ನಿಲ್ದಾಣದಿಂದ ಬೆಳಗಿನ ಜಾವ 3:15 ರಿಂದ ರಾತ್ರಿ 23:30 ಗಂಟೆಯ ವರೆಗೆ ವೇಗದೂತ ಮತ್ತು ಪ್ರತಿಷ್ಠಿತ ಸಾರಿಗೆಗಳು ಸೇರಿದಂತೆ ಒಟ್ಟು 122 ಸುತ್ತುವಳಿಗಳು ಕಾರ್ಯಾಚರಣೆಯಲ್ಲಿರುತ್ತವೆ. ಸದರಿ ಸಾರಿಗೆಗಳ ಪ್ರಯೋಜನವನ್ನು ಭಕ್ತಾಧಿಗಳು ಹಾಗೂ ಸಾರ್ವಜನಿಕ ಪ್ರಯಾಣಿಕರು ಪಡೆದುಕೊಳ್ಳುತ್ತಿರುತ್ತಾರೆ ಎಂದು ಹೇಳಿದ್ದಾರೆ. ಪ್ರಸ್ತುತ 9 ಗಂಟೆಯ ನಂತರ ರಾಯಚೂರು ಬಸ್ ನಿಲ್ದಾಣದಿಂದ ಕಾರ್ಯಾಚರಣೆಯಲ್ಲಿರುವ ಬಸ್‌ಗಳ ವಿವರ ಇಲ್ಲಿದೆ.

122/ 123. ನಾನ್ ಎಸಿ ಸ್ಲೀಪರ್. ರಾಯಚೂರಿನಿಂದ ಹೊರಡುವ ಸಮಯ 21:21
46/ 47. ವೇಗದೂತ. ರಾಯಚೂ–ರಿನಿಂದ ಹೊರಡುವ ಸಮಯ 21:30
59/ 60. ನಾನ್ ಎಸಿ ಸ್ಲೀಪರ್. ರಾಯಚೂ–ರಿನಿಂದ ಹೊರಡುವ ಸಮಯ 21:30
15/ 16. ಅಂಬಾರಿ ಡ್ರೀಮ್ ಕ್ಲಾಸ್. ರಾಯಚೂ–ರಿನಿಂದ ಹೊರಡುವ ಸಮಯ 21:45
98/ 99. ಕಲ್ಯಾಣ ರಥ. ರಾಯಚೂ–ರಿನಿಂದ ಹೊರಡುವ ಸಮಯ 23:30

ಸಾರ್ವಜನಿಕ ಪ್ರಯಾಣಿಕರು ಹಾಗೂ ಭಕ್ತಾಧಿಗಳ ಅನುಕೂಲಕ್ಕಾಗಿ ರಾಯಚೂರು ಘಟಕ–1ರಿಂದ ಅನುಸೂಚಿ ಸಂಖ್ಯೆ:50 ರಲ್ಲಿ ರಾಯಚೂರಿನಿಂದ ಮಂತ್ರಾಲಯಕ್ಕೆ ಬೆಳಗಿನ ಜಾವ 4 ಗಂಟೆಗೆ ಹಾಗೂ ದೇವದುರ್ಗ ಘಟಕದ ಅನುಸೂಚಿ ಸಂಖ್ಯೆ 46/ 47 ರಲ್ಲಿ ದೇವದುರ್ಗ–ರಾಯಚೂರು–ಮಂತ್ರಾಲಯ ಮಾರ್ಗದಲ್ಲಿ ರಾತ್ರಿ 21:30ಕ್ಕೆ ರಾಯಚೂರು ಬಸ್ ನಿಲ್ದಾಣ ನಿರ್ಗಮಿಸಿ ಮಂತ್ರಾಲಯಕ್ಕೆ ಕಾರ್ಯಾಚರಣೆಯಾಗುವಂತೆ ಹೆಚ್ಚುವರಿ ಸಾರಿಗೆ ಸೌಲಭ್ಯವನ್ನು ಕಲ್ಪಿಸಲಾಗಿರುತ್ತದೆ. ಸದರಿ ಸಾರಿಗೆಗಳ ಪ್ರಯೋಜನವನ್ನು ಸಾರ್ವಜನಿಕ ಪ್ರಯಾಣಿಕರು ಹಾಗೂ ಭಕ್ತಾಧಿಗಳು ಪಡೆದುಕೊಳ್ಳಬಹುದಾಗಿದೆ ಎಂದು ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಹಾಕಲಾಗಿದೆ.